

Volume : 9 | Issue : 194 | October : 22 : 2026 : Thursday
ಸಂಪುಟ : 9 | ಸಂಚಿಕೆ : 194 | ಅಕ್ಟೋಬರ್ : 22 : 2026 : ಗುರುವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ದಸರಾ ಸಂಭ್ರಮಕ್ಕೆ ತಾರಾ ಮೆರುಗು: ಮೈಸೂರಿನ ನಾಡಹಬ್ಬ ದಸರಾ ಆಚರಣೆಯಲ್ಲಿ ನಟಿಯರಾದ ರುಕ್ಮಿಣಿ ವಸಂತ್, ತಪಸ್ವಿನಿ ಪೂಣಚ್ಚ, ಸಪ್ತಮಿ ಗೌಡ ಸೇರಿದಂತೆ ಕನ್ನಡ ಚಿತ್ರರಂಗದ ಹಲವು ಕಲಾವಿದರು ಭಾಗಿಯಾಗಿ ಸಂಭ್ರಮಿಸಿದರು.

**ಖಾಸಗಿ ಆಸ್ಪತ್ರೆಗಳಿಗೆ ಹೊಸ ನಿಯಮ: ನ. 1ರಿಂದ ಜಾರಿ** – ಪುಟ 3

**'ರೌಡಿ ಪಡೆ ಮಟ್ಟಹಾಕಲು ವಿಶೇಷ ಪಡೆ'** – ಪುಟ 4

## ■ ಸುದ್ದಿ ಚುಟುಕು

### ದೇವಸ್ಥಾನದ ಪ್ರಸಾದ ಸೇವಿಸಿ 100ಕ್ಕೂ ಹೆಚ್ಚು ಭಕ್ತರು ಅಸ್ವಸ್ಥ

● ವಿಕ್ರಮ ವಾಹಿನಿ । ಬೆಳಗಾವಿ

ಚಿಕ್ಕೋಡಿ ತಾಲೂಕಿನ ಜೋಡಟ್ಟಿ ಗ್ರಾಮದ ಶೇಲ್ಲೆವ್ವಾ ದೇವಸ್ಥಾನದ ಜಾತ್ರೆಯಲ್ಲಿ ಪ್ರಸಾದ ಸೇವಿಸಿದ 100ಕ್ಕೂ ಹೆಚ್ಚು ಭಕ್ತರು ಅಸ್ವಸ್ಥಗೊಂಡ ಘಟನೆ ಬುಧವಾರ ನಡೆದಿದೆ.

ಪ್ರಸಾದ ಸೇವಿಸಿದ ಬಳಿಕ ಭಕ್ತರಿಗೆ ವಾಂತಿ, ಭೇದಿ ಕಾಣಿಸಿಕೊಂಡಿದ್ದು, ತಕ್ಷಣ ಅವರನ್ನು ಕಬ್ಬೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಈ ಪೈಕಿ 71 ಮಂದಿ ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದು, ಉಳಿದ ಸುಮಾರು 30 ಮಂದಿಗೆ ಚಿಕಿತ್ಸೆ ಮುಂದುವರಿದಿದೆ.

ಘಟನೆ ತಿಳಿಯುತ್ತಿದ್ದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಸಾದ ತಯಾರಿಕೆಗೆ ಬಳಸಿದ ಆಹಾರ ಪದಾರ್ಥಗಳು ಮತ್ತು ನೀರಿನ ಗುಣಮಟ್ಟದ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ. ಅಸ್ವಸ್ಥತೆಗೆ ನಿಖರ ಕಾರಣ ಪರೀಕ್ಷಾ ವರದಿ ಬಂದ ಬಳಿಕ ತಿಳಿಯಬೇಕಿದೆ. ಆಸ್ಪತ್ರೆಗೆ ದಾಖಲಾದ ಭಕ್ತರ ಆರೋಗ್ಯದ ಮೇಲೆ ವೈದ್ಯರು ನಿಗಾ ಇರಿಸಿದ್ದು, ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ. ಈಗಾಗಲೇ ಚಿಕಿತ್ಸೆ ಪಡೆದು ಬಿಡುಗಡೆಯಾದವರಿಗೆ ಆರೋಗ್ಯದಲ್ಲಿ ಮತ್ತೆ ಏನಾದರೂ ತೊಂದರೆ ಕಾಣಿಸಿಕೊಂಡರೆ ತಕ್ಷಣ ಆಸ್ಪತ್ರೆಗೆ ಬರುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ಆರೋಗ್ಯ ಇಲಾಖೆ ಅಧಿಕಾರಿಗಳು ದೇವಸ್ಥಾನದ ಆವರಣ ಹಾಗೂ ಪ್ರಸಾದ ತಯಾರಿಸಿದ ಸ್ಥಳವನ್ನು ಪರಿಶೀಲಿಸಿದ್ದು, ಆಹಾರ ಪದಾರ್ಥಗಳ ಮಾದರಿಗಳನ್ನು ಸಂಗ್ರಹಿಸುವ ಪ್ರಕ್ರಿಯೆ ಕೈಗೊಂಡಿದ್ದಾರೆ. ಪ್ರಸಾದ ತಯಾರಿಕೆಯಲ್ಲಿ ಬಳಸಿದ ನೀರು ಮತ್ತು ಇತರ ಪದಾರ್ಥಗಳ ಗುಣಮಟ್ಟವನ್ನು ಪರೀಕ್ಷೆಗೆ ಒಳಪಡಿಸುವ ಸಾಧ್ಯತೆಯಿದೆ.

ಇಂತಹ ಘಟನೆಗಳು ಮರುಕಳಿಸದಂತೆ ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಜಾತ್ರೆಯ ಆಯೋಜಕರು ಆಹಾರ ತಯಾರಿಕೆ ಮತ್ತು ವಿತರಣೆಯ ವೇಳೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಅಧಿಕಾರಿಗಳ ಪರಿಶೀಲನೆ ಮತ್ತು ವೈದ್ಯಕೀಯ ವರದಿಯ ಬಳಿಕ ಘಟನೆಯ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ.

### ಟ್ರಾಫಿಕ್ ಪೊಲೀಸರ ಮೇಲೆ ಕಾರು ಹರಿಸಿದ ಆರೋಪ: ಎಫ್‌ಐಆರ್ ರದ್ದತಿಗೆ ನಕಾರ

● ವಿಕ್ರಮ ವಾಹಿನಿ । ಬೆಂಗಳೂರು

ಮದ್ಯಪಾನ ತಪಾಸಣೆ ವೇಳೆ ಕರ್ತವ್ಯನಿರತ ಸಂಚಾರಿ ಪೊಲೀಸ್ ಸಿಬ್ಬಂದಿಯ ಮೇಲೆ ಕಾರು ಹರಿಸಿ ಗಾಯಗೊಳಿಸಿದ ಆರೋಪ ಎದುರಿಸುತ್ತಿರುವ ವ್ಯಕ್ತಿಯ ವಿರುದ್ಧದ ಎಫ್‌ಐಆರ್ ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ತಮ್ಮ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣ ರದ್ದು ಕೋರಿ ಬೆಂಗಳೂರಿನ ನಾಗರಭಾವಿ ನಿವಾಸಿ ರಾಮಾಂಜಲು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ವಿಚಾರಣೆ ನಡೆಸಿ ಈ ಆದೇಶ ನೀಡಿದೆ.

ಪೊಲೀಸರು ಕಾನೂನುಬದ್ಧವಾಗಿ ಕರ್ತವ್ಯ ನಿರ್ವಹಿಸುವಾಗ ಅವರ ಮೇಲೆ ಕಾರು ಚಲಾಯಿಸಿರುವ ಆರೋಪವನ್ನು ಗಂಭೀರವಾಗಿ ಪರಿಗಣಿಸಿದ ಪೀಠ, ವಾಹನವನ್ನು ಬೆದರಿಕೆ ಅಥವಾ ಹಿಂಸೆಯ ಸಾಧನವಾಗಿ ಬಳಸಲು ಅವಕಾಶ ನೀಡಲಾಗದು ಎಂದು ಅಭಿಪ್ರಾಯಪಟ್ಟಿತು. ವೈದ್ಯಕೀಯ ವರದಿ ಮತ್ತು ಪ್ರತ್ಯಕ್ಷದರ್ಶಿಗಳ ಹೇಳಿಕೆಗಳು ಮೇಲ್ನೋಟಕ್ಕೆ ಅಪರಾಧದ ಅಂಶಗಳನ್ನು ಸೂಚಿಸುತ್ತಿರುವುದರಿಂದ, ವಿಚಾರಣೆಗೂ ಮುನ್ನ ಪ್ರಕರಣ ರದ್ದುಗೊಳಿಸಲಾಗದು ಎಂದು ತಿಳಿಸಿತು.

**ಪ್ರಕರಣದ ಹಿನ್ನೆಲೆ:** 2021ರ ಅಕ್ಟೋಬರ್ 23ರಂದು ಎಚ್‌ಎಎಲ್ ವಿಮಾನ ನಿಲ್ದಾಣ ರಸ್ತೆಯ ಅಂಚೆ ಕಚೇರಿ ಬಳಿ ಮದ್ಯಪಾನ ಮಾಡಿ ವಾಹನ ಚಲಾಯಿಸುವವರ ತಪಾಸಣೆ ನಡೆಯುತ್ತಿತ್ತು. ಈ ವೇಳೆ ಹುಂಡೈ ಕ್ರೆಟಾ ಕಾರನ್ನು ತಡೆಯಲು ಮುಂದಾದ ಸಂಚಾರಿ ಪೊಲೀಸ್ ಹೆಡ್‌ಕಾನ್‌ಸ್ಟೆಬಲ್‌ಗೆ ಕಾರು ತಾಗಿ ಗಾಯಗಳಾಗಿದ್ದವು. ಅವರ ಕಾಲಿನ ಮೂಳೆ ಮುರಿದಿದ್ದು, ಮದ್ಯಪಾನ ತಪಾಸಣೆಯ ಯಂತ್ರವೂ ಹಾನಿಗೊಳಗಾಗಿತ್ತು ಎಂಬುದು ಆರೋಪ.

ಈ ಸಂಬಂಧ ಹೆಡ್‌ಕಾನ್‌ಸ್ಟೆಬಲ್ ನೀಡಿದ ದೂರಿನ ಮೇರೆಗೆ ಎಚ್‌ಎಎಲ್ ಸಂಚಾರ ಪೊಲೀಸರು ಕೊಲೆ ಯತ್ನ, ಸರ್ಕಾರಿ ನೌಕರನ ಕರ್ತವ್ಯಕ್ಕೆ ಅಡ್ಡಿಪಡಿಸುವುದು ಸೇರಿದಂತೆ ವಿವಿಧ ಆರೋಪಗಳಡಿ ಪ್ರಕರಣ ದಾಖಲಿಸಿದ್ದರು. ಇದನ್ನು ಪ್ರಶ್ನಿಸಿ ರಾಮಾಂಜಲು ಹೈಕೋರ್ಟ್ ಮೊರೆ ಹೋಗಿದ್ದರು. ಇದೀಗ ಎಫ್‌ಐಆರ್ ರದ್ದತಿಗೆ ನ್ಯಾಯಾಲಯ ನಿರಾಕರಿಸಿದೆ.



ಮೈಸೂರು ಅರಮನೆ ಆವರಣದಲ್ಲಿ ಜಂಬೂ ಸವಾರಿಯಲ್ಲಿ ಬಂದ ತಾಯಿ ಚಾಮುಂಡೇಶ್ವರಿ ಮೂರ್ತಿಗೆ ಸಿಎಂ ಡಿ ಕೆ ಶಿವಕುಮಾರ್ ಹಾಗೂ ಅವರ ಪತ್ನಿ ಉಷಾ ಪುಷ್ಪನಮನ ಸಲ್ಲಿಸಿದರು. ಕೇರಳಂ ಸಿಎಂ ವಿ ಡಿ ಸತೀಶನ್, ತೆಲಂಗಾಣ ಸಿಎಂ ರೇವಂತ್ ರೆಡ್ಡಿ, ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ, ಸಚಿವ ಶಿವರಾಜ್ ತಂಗಡಗಿ, ರಾಜಮನೆತನದ ಪ್ರತಿನಿಧಿ ಹಾಗೂ ಸಂಸದ ಯದುವೀರ ಒಡೆಯರ್, ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ, ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರೂ ಪುಷ್ಪ ನಮನ ಸಲ್ಲಿಸಿದರು.

# ದಸರಾ ವೈಭವಕ್ಕೆ ಸಾಕ್ಷಿಯಾದ ಜನಸಾಗರ

● ವಿಕ್ರಮ ವಾಹಿನಿ । ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ ಜಂಬೂಸವಾರಿಗೆ ಬುಧವಾರ ಸಂಜೆ ಅರಮನೆಯ ಆವರಣದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಾಡಿನ ಅಧಿದೇವತೆ ತಾಯಿ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಮೀನ ಲಗ್ನದಲ್ಲಿ ಸಂಜೆ 4.10ರಿಂದ 4.35ರೊಳಗೆ ನಡೆದ ಈ ಧಾರ್ಮಿಕ ವಿಧಿಯಲ್ಲಿ ನೆರೆಯ ರಾಜ್ಯಗಳ ಮುಖ್ಯಮಂತ್ರಿಗಳಾದ ಕೇರಳದ ವಿ.ಡಿ. ಸತೀಶನ್, ತೆಲಂಗಾಣದ ರೇವಂತ್ ರೆಡ್ಡಿ ಹಾಗೂ ಮೈಸೂರು ರಾಜವಂಶಸ್ಥ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ನೆರೆಯ ರಾಜ್ಯಗಳ ಮುಖ್ಯಮಂತ್ರಿಗಳು ಇದೇ ಮೊದಲ ಬಾರಿಗೆ ಪುಷ್ಪಾರ್ಚನೆಯಲ್ಲಿ ಭಾಗವಹಿಸಿದ್ದು, ರಾಜ್ಯಗಳ ನಡುವಿನ ಸಾಮರಸ್ಯ ಮತ್ತು ಸೌಹಾರ್ದದ ಸಂದೇಶ ಸಾರಿತು. ರಾಜವಂಶಸ್ಥ ಯದುವೀರ್ ಅವರ ಉಪಸ್ಥಿತಿಯೊಂದಿಗೆ ಸಾಂಪ್ರದಾಯಿಕ ವೈಭವವೂ ಮೆರವಣಿಗೆಗೆ ಮೆರಗು ನೀಡಿತು.

**ಮೈಸೂರು ಪೇಟ ಧರಿಸಿ ನಂದಿಧ್ವಜಕ್ಕೆ ಪೂಜೆ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಧ್ಯಾಹ್ನ 1.36ರಿಂದ 1.56ರ ಮಕರ ಲಗ್ನದಲ್ಲಿ ಅರಮನೆಯ ಬಲರಾಮ ದ್ವಾರದ ಬಳಿಯ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಸಾಂಪ್ರದಾಯಿಕ ಮೈಸೂರು ಪೇಟ ಧರಿಸಿ ನಂದಿಧ್ವಜಕ್ಕೆ ಪೂಜೆ ಸಲ್ಲಿಸಿದರು. ಸಚಿವ ಸಂಪುಟದ ಸಹೋದ್ಯೋಗಿಗಳೊಂದಿಗೆ ನಾಡಿನ ಒಳಿತಿಗಾಗಿ ಪ್ರಾರ್ಥಿಸಿ, ದಸರಾ ಸ್ತಬ್ಧಚಿತ್ರಗಳು ಹಾಗೂ ಕಲಾತಂಡಗಳ ಮೆರವಣಿಗೆಗೆ ಚಾಲನೆ ನೀಡಿದರು.

ಇದಕ್ಕೂ ಮುನ್ನ ಸುತ್ತೂರು ಮಠಕ್ಕೆ ಭೇಟಿ ನೀಡಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಗಳ ಆಶೀರ್ವಾದ ಪಡೆದರು. ಬಳಿಕ ಹೋಮ–ಹವನಗಳಲ್ಲಿ ಪಾಲ್ಗೊಂಡು ಬನ್ನಿಮರಕ್ಕೆ ಹಾಗೂ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು.

**ಆನೆಗಳಿಗೆ ಕಬ್ಬಿನ ಜಲ್ಲೆ ನೀಡಿ ಗೌರವ:** ಚಿನ್ನದ ಅಂಬಾರಿ ಹೊತ್ತ ಹೆಗ್ಗಳಿಕೆಯ ಅಭಿಮನ್ಯು ನಿಶಾನೆ ಆನೆಯಾಗಿ ಆಗಮಿಸಿದಾಗ ಮುಖ್ಯಮಂತ್ರಿ ಅದರ ಹಣೆಗೆ ಕೈಯಿಟ್ಟು ನಮಸ್ಕರಿಸಿದರು. ಗೋಪಿ, ಮಹೇಂದ್ರ, ಚೈತ್ರ, ಸುಗ್ರೀವ, ಏಕಲವ್ಯ ಸೇರಿದಂತೆ ಇತರ ಆನೆಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಪತ್ನಿಯೊಂದಿಗೆ ಕಬ್ಬಿನ ಜಲ್ಲೆ ತಿನ್ನಿಸಿ ಗೌರವಿಸಿದರು. ಮೆರವಣಿಗೆಯಲ್ಲಿ ಭಾಗವಹಿಸಿದ ಹಳ್ಳಿಕಾರ್ ಹೋರಿಗಳನ್ನೂ ನೇವರಿಸಿ ಆಶೀರ್ವಾದ ಪಡೆದರು.

**ಕಲಾತಂಡಗಳು, ಸ್ತಬ್ಧಚಿತ್ರಗಳಿಂದ ಮೆರುಗು**

ದೇಶದ ವಿವಿಧ ರಾಜ್ಯಗಳ ಕಲಾಪ್ರಕಾರಗಳು, ಜನಪದ ನೃತ್ಯಗಳು ಹಾಗೂ ವಾದ್ಯತಂಡಗಳು ಜಂಬೂಸವಾರಿಯ ಆಕರ್ಷಣೆಯನ್ನು ಹೆಚ್ಚಿಸಿದವು. ಒಂದೇ ರೀತಿಯ ಕಲಾಪ್ರಕಾರಗಳ ಪುನರಾವರ್ತನೆ ತಪ್ಪಿಸಿ ವೈವಿಧ್ಯಕ್ಕೆ ಆದ್ಯತೆ ನೀಡಲಾಗಿತ್ತು.

ಕನ್ನಡ ಚಿತ್ರರಂಗದ ಕಲಾವಿದರು ಹಾಗೂ ಭೂಸೇನೆ, ವಾಯುಸೇನೆ ಮತ್ತು ನೌಕಾಪಡೆಯ ಬ್ಯಾಂಡ್‌ಗಳು ಮೆರವಣಿಗೆಯ ವೈಭವ ಹೆಚ್ಚಿಸಿದವು.

ತೆರೆದ ವಾಹನದಲ್ಲಿ ಅರಮನೆ ಆವರಣಕ್ಕೆ ಆಗಮಿಸಿದ ಮುಖ್ಯಮಂತ್ರಿ ಜನರಿಗೆ ಕೈಮುಗಿದು ವಂದಿಸಿದರು. ವಿದೇಶಿ ರಾಯಭಾರಿಗಳೊಂದಿಗೆ ಕುಶಲೋಪರಿ ವಿಚಾರಿಸಿ, ಯದುವೀರ್ ಅವರನ್ನು ನೆರೆಯ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪರಿಚಯಿಸಿದರು. ಕಲಾತಂಡಗಳ ಪ್ರದರ್ಶನವನ್ನು ಮೆಚ್ಚಿ ಚಪ್ಪಾಳೆ ತಟ್ಟುವ ಮೂಲಕ ಕಲಾವಿದರನ್ನು ಹುರಿದುಂಬಿಸಿದರು.

**ಅರಮನೆ ಸುತ್ತಲೂ ಜನಸಾಗರ:** ದಸರಾ ವೈಭವವನ್ನು ಕಣ್ತುಂಬಿಕೊಳ್ಳಲು ದೇಶ–ವಿದೇಶಗಳಿಂದ ಸಾವಿರಾರು ಜನರು ಮೈಸೂರಿಗೆ ಆಗಮಿಸಿದ್ದರು. ಅರಮನೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜನಸಾಗರವೇ ನೆರೆದಿದ್ದು, ನಗರದಲ್ಲಿ ಹಬ್ಬದ ಸಂಭ್ರಮ ಮನೆಮಾಡಿತ್ತು.

ರಾತ್ರಿ ಬನ್ನಿಮಂಟಪದಲ್ಲಿ ನೂತನ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರೊಂದಿಗೆ ಮುಖ್ಯಮಂತ್ರಿ ಪಂಜಿನ ಕವಾಯತು ವೀಕ್ಷಿಸಿದರು.

ಕೇರಳ ಮತ್ತು ತೆಲಂಗಾಣದ ಮುಖ್ಯಮಂತ್ರಿಗಳೂ ಈ ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ಡ್ರೋನ್‌ಗಳ ಮೂಲಕ ಆಕಾಶದಲ್ಲಿ ಮೂಡಿಬಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬೃಹತ್ ಚಿತ್ರ ಜನರ ಗಮನ ಸೆಳೆಯಿತು. ಜನರ ಶಿಳ್ಳೆ, ಚಪ್ಪಾಳೆಗಳ ನಡುವೆ ದಸರಾ ಸಂಭ್ರಮಕ್ಕೆ ತೆರೆ ಬಿದ್ದಿತು.

ಎಲ್ಲ ಸಮುದಾಯಗಳು ಹಾಗೂ ವಿವಿಧ ರಾಜ್ಯಗಳ ಪ್ರತಿನಿಧಿಗಳನ್ನು ಒಳಗೊಂಡು ದಸರಾ ಆಚರಿಸಬೇಕೆಂಬ ಮುಖ್ಯಮಂತ್ರಿಗಳ ಆಶಯದಂತೆ ಈ ಬಾರಿಯ ಉತ್ಸವ ಸಾಂಸ್ಕೃತಿಕ ವೈವಿಧ್ಯ ಮತ್ತು ಸಾಮರಸ್ಯದ ಸಂದೇಶದೊಂದಿಗೆ ಸಂಪನ್ನವಾಯಿತು.

## *ನಿರ್ಮಾಣ ಹಂತದ ಕಟ್ಟಡದಲ್ಲಿ ನಿಗೂಢ ಸ್ಫೋಟ: ಇಬ್ಬರು ಕಾರ್ಮಿಕರಿಗೆ ಗಾಯ*

● ವಿಕ್ರಮ ವಾಹಿನಿ । ಬೆಂಗಳೂರು

*ನಗರದ ಪುಲಕೇಶಿನಗರದ ಜೆರ್ಮಿಯಾ ರಸ್ತೆಯಲ್ಲಿ ನಿರ್ಮಾಣ ಹಂತದ ಕಟ್ಟಡವೊಂದರಲ್ಲಿ ಸಂಭವಿಸಿದ ನಿಗೂಢ ಸ್ಫೋಟದಲ್ಲಿ ಇಬ್ಬರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಫೋಟದ ತೀವ್ರತೆಗೆ ಸೂರಜ್ ಎಂಬ ಕಾರ್ಮಿಕನ ಕೈಬೆರಳೊಂದು ಕತ್ತರಿಸಿದ್ದು, ಗಾಯಾಳುಗಳಾದ ಅಲ್ಲಾವುದ್ದೀನ್ ಮತ್ತು ಸೂರಜ್ ಅವರನ್ನು ಬೌರಿಂಗ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.*

*ಅಬ್ದುಲ್ ರೆಹಮಾನ್ ಅವರಿಗೆ ಸೇರಿದ ಕಟ್ಟಡದ ನಾಲ್ಕನೇ ಮಹಡಿಯಲ್ಲಿ ಈ ಘಟನೆ ಸಂಭವಿಸಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಕಾರ್ಮಿಕರಿಗೆ ರಸ್ತೆಯಲ್ಲಿ ಬಿದ್ದಿದ್ದ ಬ್ಯಾಗ್ ಸಿಕ್ಕಿದ್ದು, ಅದನ್ನು ಕಟ್ಟಡದ ಮೇಲಕ್ಕೆ ಕೊಂಡೊಯ್ದು ತೆರೆದಾಗ ಏಕಾಏಕಿ ಸ್ಫೋಟ ಸಂಭವಿಸಿದೆ ಎನ್ನಲಾಗಿದೆ. ಸ್ಫೋಟದಿಂದ ಇಬ್ಬರ ತಲೆ ಮತ್ತು ಮುಖದ ಭಾಗಗಳಿಗೆ ಗಂಭೀರ ಗಾಯಗಳಾಗಿವೆ.*

***ಐಇಡಿ ಸ್ಫೋಟದ ಶಂಕೆ; ತನಿಖೆ ಚುರುಕು:*** *ಘಟನೆಯ ಗಂಭೀರತೆಯನ್ನು ಪರಿಗಣಿಸಿ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್), ಆಂತರಿಕ ಭದ್ರತಾ ವಿಭಾಗ (ಐಎಸ್‌ಡಿ) ಹಾಗೂ ಬಾಂಬ್ ಪತ್ತೆ ದಳದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.* 3ನೇ ಪುಟಕ್ಕೆ...

### ಐಇಡಿ ಶಂಕೆ: ತನಿಖೆಗೆ ವಿಶೇಷ ತಂಡ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪುಲಕೇಶಿನಗರದ ನಿರ್ಮಾಣ ಹಂತದ ಕಟ್ಟಡದಲ್ಲಿ ಸಂಭವಿಸಿದ ಅನುಮಾನಾಸ್ಪದ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ತನಿಖೆಗಾಗಿ ವಿಶೇಷ ತಂಡಗಳನ್ನು ರಚಿಸಿದ್ದಾರೆ.

ಸ್ಫೋಟಕ್ಕೆ ಕಾರಣವಾದ ವಸ್ತುವಿನ ಕುರಿತು ವಿಧಿವಿಜ್ಞಾನ ಪ್ರಯೋಗಾಲಯದ (ಎಫ್‌ಎಸ್‌ಎಲ್) ತಜ್ಞರು, ಬಾಂಬ್ ನಿಷ್ಕ್ರಿಯ ದಳ ಹಾಗೂ ಭಯೋತ್ಪಾದನಾ ನಿರೋಧಕ ದಳದ ಸಿಬ್ಬಂದಿ ಪರಿಶೀಲನೆ ನಡೆಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪುಲಕೇಶಿನಗರ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್‌ಗಳಾದ 61, 3(5) ಹಾಗೂ ಸ್ಫೋಟಕ ವಸ್ತುಗಳ ಕಾಯ್ದೆಯ ಸೆಕ್ಷನ್‌ಗಳಾದ 3 ಮತ್ತು 5ರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಎಫ್‌ಎಸ್‌ಎಲ್ ತಜ್ಞರು ಘಟನಾ ಸ್ಥಳದಿಂದ ಮಾದರಿಗಳನ್ನು ಸಂಗ್ರಹಿಸಿದ್ದು, ಸ್ಫೋಟಕ್ಕೆ ಕಾರಣವಾದ ವಸ್ತು ಯಾವುದು ಎಂಬುದನ್ನು ಪತ್ತೆಹಚ್ಚಲು ಪರೀಕ್ಷೆ ನಡೆಸಲಾಗುತ್ತಿದೆ. 3ನೇ ಪುಟಕ್ಕೆ...

### ತಪಾಸಣೆ ವಿಳಂಬಕ್ಕೆ ಕಡಿವಾಣ: ಖಾಸಗಿ ಏಜೆನ್ಸಿಗಳ ಸೇವೆಗೆ ಸರ್ಕಾರದ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನಿಯಂತ್ರಣಾತ್ಮಕ ತಪಾಸಣೆ ಮತ್ತು ಪ್ರಮಾಣೀಕರಣ ಕಾರ್ಯಗಳು ವಿಳಂಬವಾಗುವುದನ್ನು ತಪ್ಪಿಸಿ, ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಖಾಸಗಿ ಸಂಸ್ಥೆಗಳ ಸೇವೆ ಪಡೆಯಲು ಸರ್ಕಾರ ನಿರ್ಧರಿಸಿದೆ. ಕ್ಷೇತ್ರಮಟ್ಟದಲ್ಲಿ ಪರಿಶೀಲನಾ ಸಿಬ್ಬಂದಿ ಕೊರತೆಯಿರುವ ಇಲಾಖೆಗಳಲ್ಲಿ ತಪಾಸಣೆ ಮತ್ತು ಲೆಕ್ಕಪರಿಶೋಧನಾ ಕಾರ್ಯಗಳಿಗೆ ಅಧಿಕೃತ ಮೂರನೇ ವ್ಯಕ್ತಿ ಸಂಸ್ಥೆಗಳನ್ನು ಬಳಸಿಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ.

ನ್ಯಾಯ ಮಾಪನಶಾಸ್ತ್ರ ಇಲಾಖೆ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಹಾಗೂ ಕಾರ್ಖಾನೆಗಳು ಮತ್ತು ಬಾಯ್ಲರ್‌ಗಳ ಇಲಾಖೆಯಲ್ಲಿ ಈ ವ್ಯವಸ್ಥೆಗೆ ಆದ್ಯತೆ ನೀಡಲಾಗುತ್ತದೆ.

ತೂಕ ಮತ್ತು ಅಳತೆ ಉಪಕರಣಗಳ ವಾರ್ಷಿಕ ಪರಿಶೀಲನೆ, ಆಹಾರ ಉದ್ಯಮಗಳು, ಹೋಟೆಲ್‌ಗಳು, ಔಷಧ ಮಳಿಗೆಗಳ ತಪಾಸಣೆ ಹಾಗೂ ಕೈಗಾರಿಕಾ ಬಾಯ್ಲರ್‌ಗಳ ಸುರಕ್ಷತಾ ಪರಿಶೀಲನೆ ಮತ್ತು ಪ್ರಮಾಣೀಕರಣ ಕಾರ್ಯಗಳನ್ನು ತ್ವರಿತಗೊಳಿಸುವುದು ಇದರ ಉದ್ದೇಶವಾಗಿದೆ.

**ಸರ್ಕಾರಿ ಅಧಿಕಾರಿಗಳ ಅಧಿಕಾರ ಯಥಾಸ್ಥಿತಿ**

ಖಾಸಗಿ ಏಜೆನ್ಸಿಗಳು ತಪಾಸಣೆ ನಡೆಸಿದರೂ, ಕಾನೂನುಬದ್ಧ ನಿಯಂತ್ರಣಾಧಿಕಾರಗಳು ಸರ್ಕಾರಿ ಅಧಿಕಾರಿಗಳ ಬಳಿಯೇ ಇರಲಿವೆ. ಆಹಾರ ಮತ್ತು ಔಷಧಗಳ ಮಾದರಿ ಸಂಗ್ರಹಣೆ, ವಶಪಡಿಸಿಕೊಳ್ಳುವಿಕೆ ಹಾಗೂ ಕಾನೂನು ಕ್ರಮ ಜರುಗಿಸುವ ಅಧಿಕಾರವನ್ನು ಖಾಸಗಿ ಸಂಸ್ಥೆಗಳಿಗೆ ನೀಡಲಾಗುವುದಿಲ್ಲ.

ಏಜೆನ್ಸಿಗಳು ಸಲ್ಲಿಸುವ ವರದಿ ಮತ್ತು ಪರಿಶೀಲನಾ ದಾಖಲೆಗಳನ್ನು ಆಧರಿಸಿ, ಅಪಾಯದ ಸಾಧ್ಯತೆ ಹೆಚ್ಚಿರುವ ಸಂಸ್ಥೆಗಳ ಮೇಲೆ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಲಿದ್ದಾರೆ. 3ನೇ ಪುಟಕ್ಕೆ...

## ಬಸನಗೌಡ ಪಾಟೀಲ್ ಯತ್ನಾಳ್ ಬಿಜೆಪಿ ಘರ್ ವಾಪ್ಸಿಗೆ ಪ್ರಕ್ರಿಯೆ ಆರಂಭ

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತವರ ಕುಟುಂಬ ಸದಸ್ಯರ ವಿರುದ್ಧ ತಿರುಗಿ ಬಿದ್ದಿದ್ದ ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಧಾರವಾಡದ ಛಬ್ಬಿಯಲ್ಲಿ ನಡೆದ ಖಾಸಗಿ ಕಾರ್ಯಕ್ರಮದಲ್ಲಿ ಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರನ್ನು ಭೇಟಿಯಾದ ಬೆನ್ನಲ್ಲೇ ತಮ್ಮ ಬದ್ಧ ದ್ವೇಷಿ ಮಾಜಿ ಸಚಿವ ಮುರುಗೇಶ್ ನಿರಾಣಿ ಅವರೊಂದಿಗೆ ಚರ್ಚಿಸಿರುವುದು ರಾಜಕೀಯ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ.



ಈ ಮೂಲಕ ಬಿಜೆಪಿ ಫೈರ್ ಬ್ರ್ಯಾಂಡ್ ಗಳಾದ ಯತ್ನಾಳ್ ಹಾಗೂ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಅವರು ಬಿಜೆಪಿ ಘರ್ ವಾಪ್ಸಿಗೆ ತೆರೆಮರೆಯಲ್ಲಿ ಸದ್ದಿಲ್ಲದೇ ಸಿದ್ಧತೆಗಳು ನಡೆಯುತ್ತಿವೆ.

ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ವಿಜಯೇಂದ್ರ ಭೇಟಿ ಬೆನ್ನಲ್ಲೇ ಯತ್ನಾಳ್ ಅವರು ಮುರುಗೇಶ್ ನಿರಾಣಿ ಅವರನ್ನು ಭೇಟಿಯಾಗಿದ್ದಾರೆ.

ಬಾಗಲಕೋಟೆಯಲ್ಲಿರುವ ಬಿಜೆಪಿಯ ಹಿರಿಯ ನಾಯಕ ಮತ್ತು ರಾಜ್ಯಸಭಾ ಸದಸ್ಯರೂ ಆಗಿರುವ ನಾರಾಯಣಸಾ ಭಾಂಡಾ ಮನೆಗೆ ಯತ್ನಾಳ್, ಆಹ್ವಾನದ ಮೇರೆಗೆ ಆಗಮಿಸಿದ್ದರು.

ಆವೇಳೆ, ಅಲ್ಲಿ ಮುರುಗೇಶ್ ನಿರಾಣಿ ಕೂಡಾ ಹಾಜರಿದ್ದರು. ಸುಮಾರು ಎರಡು ಗಂಟೆಗಳ ಕಾಲ ಭಾಂಡಗೆ ನಿವಾಸದಲ್ಲಿದ್ದ ನಾಯಕರು ರಾಜಕೀಯ ವೈಷಮ್ಯ ಬಿಟ್ಟು ಮಾತುಕತೆ ನಡೆಸಿದರು ಎನ್ನಲಾಗಿದ್ದು, ಈ ಮೂಲಕ ಬಸನಗೌಡ ಪಾಟೀಲ್ ಯತ್ನಾಳ್ ಘರ್ ವಾಪ್ಸಿಗೆ ವೇದಿಕೆ ಸಿದ್ಧವಾಯ್ತಾ ಅನ್ನೋ ಚರ್ಚೆ ಜೋರಾಗಿದೆ.

ಬನ್ರೀ.. ಹಿಂದೂ ಹೃದಯ ಸಾಮ್ರಾಟ್ ಎಂದು ಯತ್ನಾಳ್ ಅವರನ್ನು ಆಹ್ವಾನಿಸಿದ ನಾರಾಯಣಸಾ ಭಾಂಡಾ, ಅವರನ್ನು ಸೋಫಾದಲ್ಲಿ ಕೂರಿಸಿದರು. ಸೋಫಾದ ಒಂದು ಕಡೆ ಯತ್ನಾಳ್, ಇನ್ನೊಂದು ಕಡೆ ನಿರಾಣಿ, ಮಧ್ಯದಲ್ಲಿ ಭಾಂಡಾ ಅವರಿದ್ದರು. ಯತ್ನಾಳ್ ಮತ್ತು ನಿರಾಣಿ, ಇಬ್ಬರೂ ತಮ್ಮ ನಡುವೆ ಏನೂ ಡಿಫರೆನ್ಸ್ ಇಲ್ಲ ಎನ್ನುವ ರೀತಿಯಲ್ಲಿ ನಗುನಗುತ್ತಾ ಸಮಯವನ್ನು ಕಳೆದರು. 2ನೇ ಪುಟಕ್ಕೆ...

### ಇ-ಮುದ್ರಾ ಭದ್ರತಾ ಲೋಪ: ಕೇಂದ್ರದಿಂದ ಸ್ಪಷ್ಟನೆ

● ವಿಕ್ರಮ ವಾಹಿನಿ । ನವದೆಹಲಿ

ಡಿಜಿಟಲ್ ಪ್ರಮಾಣಪತ್ರ ಸಂಸ್ಥೆ ಇ–ಮುದ್ರಾದಲ್ಲಿ ವರದಿಯಾಗಿರುವ ಸೈಬರ್ ಭದ್ರತಾ ಲೋಪದ ಕುರಿತು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಸ್ಪಷ್ಟನೆ ನೀಡಿದೆ. ಈ ಘಟನೆ ಸಂಸ್ಥೆಯ ಅಂತಾರಾಷ್ಟ್ರೀಯ ಡಿಜಿಟಲ್ ಪ್ರಮಾಣಪತ್ರ ಸೇವೆಗೆ ಮಾತ್ರ ಸಂಬಂಧಿಸಿದ್ದು, ಭಾರತದ ಡಿಜಿಟಲ್ ಸಹಿ ಮತ್ತು ಇ–ಸೈನ್ ಸೇವೆಗಳ ಮೇಲೆ ಯಾವುದೇ ಪರಿಣಾಮ ಬೀರಿಲ್ಲ ಎಂದು ತಿಳಿಸಿದೆ. ಇ–ಮುದ್ರಾ ಎರಡು ಪ್ರತ್ಯೇಕ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಕೇಂದ್ರದ ಕಂಟ್ರೋಲರ್ ಆಫ್ ಸರ್ಟಿಫೈಯಿಂಗ್ ಅಥಾರಿಟೀಸ್ (ಸಿಸಿಎ) ನಿಯಂತ್ರಣದಲ್ಲಿರುವ ಡಿಜಿಟಲ್ ಸಹಿ ಮತ್ತು ಇ–ಸೈನ್ ಸೇವೆಗಳು ಸುರಕ್ಷಿತವಾಗಿವೆ. 2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ಸಿಟ್ಟು ಬಂದಾಗ ಮನಸ್ಸಿಗಿಂತ ಜೋರಾಗಿ ನಾಲಗೆ ಕೆಲಸ ಮಾಡುತ್ತದೆ. ಆದರೆ ನಗು ಬಂದಾಗ ನಾಲಿಗೆಗೆ ಕೆಲಸವೇ ಇರುವುದಿಲ್ಲ. ಸದಾ ನಗುತ್ತಿರೋಣ.

## ದಿನ ಪಂಚಾಂಗ

ಅಕ್ಟೋಬರ್, 22-2026, ಗುರುವಾರ ಶರದ್ ಋತು,
ಆಶ್ವಯುಜ ಮಾಸ, ಶುದ್ಧ ಪಕ್ಷ
ಏಕಾದಶಿ ತಿಥಿ ಬೆ.11:22
ಶತಭಿಷ ನಕ್ಷತ್ರ ಸಾ.6:46
ರಾಹುಕಾಲ ಮ 1:31-3:00
ಸರ್ವತ್ರ ಏಕಾದಶಿ, ಪಾಪಾಂಕುಶ ಏಕಾದಶಿ, ಶೃಂಗೇರಿ ಶಾರದಾಂಬ ರಥ, ಚನ್ನಪಟ್ಟಣ।ಕುಡಿಕೆಬೇವೂರು ರಥ, ಚಾಮುಂಡಿ ಬೆಟ್ಟ ಮುಡಿ ಉತ್ಸವ, ಬೆಂ. ಚಾಮರಾಜಪೇಟೆ ಯಾಜ್ಞವಲ್ಕಾಶ್ರಮ ಸುರೇಶ್ವರ ಜಯಂತಿ, ಪೋಧತ್ತ ಆಳ್ವಾರ್ ತಿರುನಕ್ಷತ್ರ, ಶಿರಹಟ್ಟಿ । ಜಲ್ಲಿಗೇರಿ ತಾಂಡಾ ಶಿವಾಜಿ ರಥ ಮರುದಿನ ಅಗ್ನಿ, ಕುಷ್ಟಗಿ । ಮನ್ನೇರಾಳ ಚಂದಾಲಿಂಗೇಶ್ವರ ಜಾತ್ರೆ, ಗದಗ । ತೋಂಟ ಸಿದ್ಧಲಿಂಗಸ್ವಾಮಿ ದ್ವಿತೀಯ ಸ್ಮರಣೋತ್ಸವ, ಗದಗ ಮುಳಗುಂದ ನಾಕಾ ಅನ್ನಪೂರ್ಣೇಶ್ವರಿ ರಥ, ಕೊಪ್ಪಳ । ಕವಲೂರ ಹೊನ್ನಿನಕೆರೆ ಮಲ್ಲೇಶ್ವರ ಪಲ್ಲಕ್ಕಿ, ಹರಪನಹಳ್ಳಿ ಕಾರಣಿಕ, ಸಿಂಧನೂರು ರಥ, ಕಾಖಂಡಕಿ ಜ್ಞಾನೇಶ್ವರ ಆರಾಧನೆ

## ಆಧ್ಯಾತ್ಮ

# ದೇವಿಯನ್ನು ಭೀತಿಯಿಂದಲ್ಲ, ಪ್ರೀತಿಯಿಂದ ಆರಾಧಿಸಿ: ರಾಘವೇಶ್ವರ ಶ್ರೀ



● ವಿಕ್ರಮ ವಾಹಿನಿ । ಬೆಂಗಳೂರು

ದೇವಿಯನ್ನು ಪ್ರೀತಿಯಿಂದ ಆರಾಧಿಸಬೇಕು ಹೊರತು ಭೀತಿಯಿಂದಲ್ಲ. ಪ್ರೀತಿಯಿಂದ ಮಾಡಿದಾಗ ಆಚರಣೆಗೆ ಅರ್ಥ ಬರುತ್ತದೆ. ಭೀತಿಯಿಂದ ಮಾಡಿದಾಗ ಯಾವುದೇ ಅರ್ಥವಿಲ್ಲ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀರಾಮಚಂದ್ರಾಪುರ ಮಠದ ಶಾಖೆಯಲ್ಲಿ 21/10/2026 ರಂದು ನಡೆದ 'ನವರಾತ್ರ ನಮಸ್ಯಾ' ಮಹಾ ಸಮಾರೋಪದ ಧರ್ಮ ಸಭೆಯಲ್ಲಿ ಮಾತನಾಡಿದ ಶ್ರೀಗಳು, ನಮ್ಮೊಳಗೇ ದೇವಿಯ ಸಾನ್ನಿಧ್ಯವಿದ್ದು, ನಮ್ಮ ಹೃದಯ ಮಂದಿರದಲ್ಲಿರುವ ದೇವಿಯನ್ನು ಅಂತರ್ಮುಖಿಗಳಾಗಿ ನೋಡಲು ಸೂಕ್ತ ಕಾಲ ಈ ನವರಾತ್ರಿ. ಹೋಮ, ಪಾರಾಯಣ, ದೀಪ ನಮಸ್ಕಾರ ಎಲ್ಲವೂ ನಮ್ಮೊಳಗಿರುವ ದೇವಿಯ ಸಾನ್ನಿಧ್ಯವನ್ನು ಕಾಣಲು ಇರುವ ಉಪಕರಣಗಳು. ಸತ್ವ - ರಜೋ - ತಮೋಗುಣಗಳಿಂದಲೇ ಪ್ರಪಂಚ ನಿರ್ಮಿತವಾಗಿದೆ. ಆ ಮೂರು ಗುಣಗಳೇ ತ್ರಿಗುಣಾತ್ಮಿಕಾ ದೇವಿಯಾಗಿದ್ದು, ಆ ಮೂರು ಗುಣಗಳ ಸಮತೋಲನವನ್ನು ಕಲಿತರೆ ನಾವು ಜೀವನವನ್ನು ಗೆಲ್ಲಬಹುದು ಎಂದರು.

ದೇವಿ ಪಾರಾಯಣ ಎಂಬುದು ಕೇವಲ ಕಾಟಾಚಾರದ ಕ್ರಮವಾಗಬಾರದು. ಸಪ್ತಶತೀ, ಲಲಿತೋಪಾಖ್ಯಾನಗಳಲ್ಲಿ ದೇವಿಯ ಅವತಾರ ವಿಶೇಷತೆಗಳಿದ್ದು, ಅದನ್ನು ಓದಿದಾಗ ದೇವಿಯನ್ನು ನಮ್ಮ ಮನಸ್ಸಿನೊಳಗೆ ದೇವಿಯ ಲೀಲೆಯನ್ನು ತುಂಬಿಕೊಳ್ಳಬಹುದು. ಧ್ಯಾನದಲ್ಲಿ ದೇವಿಯನ್ನು ಗಂಟೆಗಟ್ಟಲೆ ತಂದು ಕೊಳ್ಳುವುದು ಎಲ್ಲರಿಗೂ ಕಷ್ಟ ಸಾಧ್ಯ. ಆದರೆ ಪಾರಾಯಣಗಳಿಂದ ಸುಲಭವಾಗಿ ಗಂಟೆಗಟ್ಟಲೆ ದೇವಿಯನ್ನು ನಾವು ನಮ್ಮ ಮನಸ್ಸಿನಲ್ಲಿ ತುಂಬಿಕೊಳ್ಳಬಹುದು ಎಂದರು.

ಸಂಸದ ತೇಜಸ್ವಿ ಸೂರ್ಯ, ಖ್ಯಾತ ಗಾಯಕಿ ಶಿವಶ್ರೀ ಸ್ಕಂದಪ್ರಸಾದ್ ಶ್ರೀಗಳ ಆಶೀರ್ವಾದ ಪಡೆದರು. ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಡಾ. ಟಿ. ಶ್ಯಾಂ ಭಟ್ ಗುರುಭಿಕ್ಷಾಸೇವೆ ಸಮರ್ಪಿಸಿ ಆಶೀರ್ವಾದ ಪಡೆದರು. ಹಿರಿಯ ನ್ಯಾಯವಾದಿ ರಾಜಶೇಖರ ಹಿಲ್ಯಾರ್, ಖ್ಯಾತ ಗಾಯಕ ಗರ್ತಿಕೆರೆ ರಾಘಣ್ಣ ಶ್ರೀಗಳ ಆಶೀರ್ವಾದ ಪಡೆದರು.

ಪ್ರಧಾನ ಸಂಚಾಲಕ ರಮೇಶ ಹೆಗಡೆ ಕೊರಮಂಗಲ ಸಭಾ ಪೂಜೆ ನೆರವೇರಿಸಿದರು. ಸಂಚಾಲಕ ದೀಪಕ ಹೆಗಡೆ ಗೋಳಿಕೈ ಕಾರ್ಯಕ್ರಮದ ಅವಲೋಕನ ಮಾಡಿದರು. ಶ್ರೀಮಠದ ಪ್ರಶಾನಾಧಿಕಾರಿ ಸಂತೋಷ ಹೆಗಡೆ, ವಿತ್ತಾಧ್ಯಕ್ಷ ಗಣೇಶ ಜೆ.ಎಲ್, ಹವ್ಯಕ ಮಹಾಮಂಡಲದ ಅಧ್ಯಕ್ಷ ಡಾ. ವೈ. ವಿ. ಕೃಷ್ಣಮೂರ್ತಿ, ಕಾರ್ಯದರ್ಶಿ ಮಹೇಶ ಚಟ್ನಳ್ಳಿ, ಕಾರ್ಯಕ್ರಮದ ಸಂಚಾಲಕ ವಾದಿರಾಜ ಸಾಮಗ, ಶ್ರೀವತ್ಸ ಮೂಡುಗೋಡು, ಗಾಯತ್ರೀ ಭಾಗ್ವತ್, ಶಿವರಾಜ ಪೆರ್ಮುಖ ಉಪಸ್ಥಿತರಿದ್ದರು.

# ಬಸನಗೌಡ ಪಾಟೀಲ್ ಯತ್ನಾಳ್ ಬಿಜೆಪಿ ಘರ್ ವಾಪ್ಸಿಗೆ ಪ್ರಕ್ರಿಯೆ ಆರಂಭ

1ನೇ ಪುಟದಿಂದ

"ರಾಜಕೀಯದಲ್ಲಿ ಯಾರೂ ಶಾಸ್ವತ ಮಿತ್ರರೂ ಇಲ್ಲ, ಶತ್ರುಗಳೂ ಅಲ್ಲ. ಯತ್ನಾಳ್ ನಮ್ಮ ಪಾರ್ಟಿಯಿಂದಲೇ ಶಾಸಕರಾದವರು, ಈಗ, ಅವರು ಉಚ್ಚಾಟನೆಗೊಂಡಿರಬಹುದು. ಯತ್ನಾಳ್ ಅವರು ವಾಪಸ್ ಬರಬೇಕು ಎನ್ನುವುದು ನಮ್ಮೆಲ್ಲರ ಆಶಯ ಮತ್ತು ಒತ್ತಾಯ ಕೂಡಾ" ಎಂದು ಮುರುಗೇಶ್ ನಿರಾಣಿ ಹೇಳಿದ್ದಾರೆ.

ಬಿವೈ ವಿಜಯೇಂದ್ರ ಮತ್ತು ಯತ್ನಾಳ್ ಭೇಟಿ ವಿಚಾರದ ಬಗ್ಗೆ ಎಂಎಲ್ಸಿ ಸಿ.ಟಿ. ರವಿ ಪ್ರತಿಕ್ರಿಯಿಸಿದ್ದಾರೆ. ರಾಜಕೀಯ ಭೇಟಿಯೂ ವೈಯಕ್ತಿಕ ಭೇಟಿಯೋ ಗೊತ್ತಿಲ್ಲ. ದೌರ್ಬಲ್ಯಗಳು ಎಲ್ಲರಲ್ಲೂ ಇದ್ದಾವೆ, ದೌರ್ಬಲ್ಯಗಳನ್ನ ದೂರ ಮಾಡಿಕೊಂಡು ಒಟ್ಟಾಗಿ ಹೋದರೆ ಖಂಡಿತವಾಗಿಯೂ ಒಂದು ಒಳ್ಳೆಯ ಸಂದೇಶ ಸಿಗಲಿದೆ. ಒಟ್ಟಾಗುವುದನ್ನ ಯಾರು ಬೇಡ ಅಂತಾರೆ. ಒಟ್ಟಾಗಬೇಕು. ದೌರ್ಬಲ್ಯಗಳನ್ನು ದೂರ ಮಾಡ್ಕೊಂಡು ಒಟ್ಟಾದರೆ ಒಳ್ಳೆ ಫಲಿತಾಂಶ ಖಂಡಿತ ಬರುತ್ತದೆ ಎಂದು ಹೇಳಿದ್ದರು.

# ಮಡಿಕೇರಿ ದಸರಾ ವೇದಿಕೆಯಲ್ಲಿ ತಗಡೂರುರಿಗೆ ಸನ್ಮಾನ

● ವಿಕ್ರಮ ವಾಹಿನಿ । ಮಡಿಕೇರಿ




ಐತಿಹಾಸಿಕ ಮಡಿಕೇರಿ ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರನ್ನು ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಕೋವಿಡ್ ಸಂದರ್ಭದಲ್ಲಿ ಸಂಕಷ್ಟದಲ್ಲಿದ್ದ ಪತ್ರಕರ್ತರ ಕುಟುಂಬಗಳಿಗೆ ನೆರವಾಗಿದ್ದರಿಂದ ಹಿಡಿದು ಇತ್ತೀಚೆಗೆ ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ನೀಡಿಕೆ ತನಕ ತಗಡೂರು ಅವರ ಹೋರಾಟವನ್ನು ವೇದಿಕೆಯಲ್ಲಿ ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಶಿವಾನಂದ ತಗಡೂರು, ಮಡಿಕೇರಿ ದಸರಾ ತನ್ನದೇ ಆದ ವಿಶಿಷ್ಟ ಪರಂಪರೆ, ಸಾಂಸ್ಕೃತಿಕ ವೈಭವ ಹಾಗೂ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ. ಜನರ ಉತ್ಸಾಹ, ಸಂಭ್ರಮ ಹಾಗೂ ಸಾಂಸ್ಕೃತಿಕ ಸೊಗಡಿನಿಂದ ಕೂಡಿರುವ ಈ ದಸರಾ ಮಹೋತ್ಸವದಲ್ಲಿ ಭಾಗವಹಿಸಿರುವುದು ಅಪಾರ ಸಂತಸ ತಂದಿದೆ ಎಂದು ಹೇಳಿದರು.

ಮಡಿಕೇರಿ ಕ್ಷೇತ್ರದ ಯುವ ಶಾಸಕ ಡಾ. ಮಂತರ್ ಗೌಡ ಅವರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುತ್ತಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿರುವ ಅವರ ಕಾರ್ಯವೈಖರಿ ಮೆಚ್ಚುಗೆಗೆ ಪಾತ್ರವಾಗಿದೆ. ಯುವ ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿಯ ಬಗ್ಗೆ ಅವರು ತೋರುತ್ತಿರುವ ಕಾಳಜಿ ಅಭಿಮಾನ ಮೂಡಿಸಿದೆ ಎಂದು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಏಷ್ಯಾಡ್ ನಲ್ಲಿ ಚಿನ್ನದ ಪದಕ ವಿಜೇತೆ ಪೂವಮ್ಮ, ಕು.ಸಿಂಚನ ಹಾಗೂ ಮುಖ್ಯಮಂತ್ರಿಗಳ ಮಾಧ್ಯಮ ಸಂಯೋಜಕ ದೀಪಕ್ ತಮ್ಮಯ ಅವರನ್ನು ದಸರಾ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕ ಡಾ. ಮಂತರ್ ಗೌಡ ದಂಪತಿ, ಜಿಲ್ಲಾಡಳಿತದ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಸಂಗೀತ ಸಂಜೆ ಕಾರ್ಯಕ್ರಮ ಪ್ರೇಕ್ಷಕರನ್ನು ರಂಜಿಸಿತು. ಸಾಂಸ್ಕೃತಿಕ ಸಂಭ್ರಮದ ನಡುವೆ ನಡೆದ ಸನ್ಮಾನ ಸಮಾರಂಭ ದಸರಾ ವೈಭವಕ್ಕೆ ಮತ್ತಷ್ಟು ಮೆರುಗು ನೀಡಿತು.

# ಇ-ಮುದ್ರಾ ಭದ್ರತಾ ಲೋಪ: ಕೇಂದ್ರದಿಂದ ಸ್ಪಷ್ಟನೆ

1ನೇ ಪುಟದಿಂದ

ಮತ್ತೊಂದೆಡೆ, ಜಾಗತಿಕ ವೆಬ್‌ಸೈಟ್‌ಗಳು, ತಂತ್ರಾಂಶಗಳು ಹಾಗೂ ಆನ್‌ಲೈನ್ ಸಂವಹನಗಳ ಭದ್ರತೆಗೆ ಡಿಜಿಟಲ್ ಪ್ರಮಾಣಪತ್ರಗಳನ್ನು ಒದಗಿಸುವ ಅಂತಾರಾಷ್ಟ್ರೀಯ ವಿಭಾಗದಲ್ಲಿ ಲೋಪ ವರದಿಯಾಗಿದೆ ಎಂದು ಸಚಿವಾಲಯ ವಿವರಿಸಿದೆ.

ಈ ಭದ್ರತಾ ಘಟನೆಯಿಂದ ಭಾರತೀಯ ವೆಬ್‌ಸೈಟ್‌ಗಳು ಮತ್ತು ಮೊಬೈಲ್ ಅಪ್ಲಿಕೇಶನ್‌ಗಳ ಮೇಲೆ ಅತ್ಯಂತ ಸೀಮಿತ ಅವಧಿಗೆ ಮಾತ್ರ ಪರಿಣಾಮ ಉಂಟಾಗಿದೆ ಎಂದು ತಿಳಿಸಲಾಗಿದೆ. ಅಂತಾರಾಷ್ಟ್ರೀಯ ಪ್ರಮಾಣಪತ್ರ ಸೇವೆಯು ಸ್ವತಂತ್ರ ಆಡಿಟ್ ಪ್ರಕ್ರಿಯೆಗೆ ಒಳಪಟ್ಟಿದ್ದು, ಸಚಿವಾಲಯದ ವ್ಯಾಪ್ತಿಯಲ್ಲಿನ ಸೇವೆಗಳಿಗೂ ಇದಕ್ಕೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

ಘಟನೆಯ ಕುರಿತು ಸಂಬಂಧಪಟ್ಟ ಸಂಸ್ಥೆಗಳೊಂದಿಗೆ ಕೇಂದ್ರ ಸರ್ಕಾರ ಸಮನ್ವಯ ಸಾಧಿಸುತ್ತಿದ್ದು, ತನಿಖೆ ಹಾಗೂ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳುತ್ತಿದೆ. ಭಾರತೀಯ ಕಂಪ್ಯೂಟರ್ ತುರ್ತು ಸ್ಪಂದನಾ ಪಡೆ (ಸಿಇಆರ್‌ಟಿ-ಇನ್) ಕೂಡ ಮುನ್ನೆಚ್ಚರಿಕೆ ಮತ್ತು ಪರಿಹಾರ ಕ್ರಮಗಳ ಕುರಿತು ಮಾರ್ಗಸೂಚಿ ಪ್ರಕಟಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಡುತ್ತಿರುವ ವದಂತಿಗಳನ್ನು ನಂಬದಂತೆ ಸಾರ್ವಜನಿಕರಿಗೆ ಸೂಚಿಸಲಾಗಿದೆ.

ಇ-ಮುದ್ರಾ ಘಟನೆಯ ಹಿನ್ನೆಲೆಯಲ್ಲಿ ಡಿಜಿಟಲ್ ಪ್ರಮಾಣಪತ್ರ ಸೇವೆಗಳ ಸುರಕ್ಷತೆ ಮತ್ತು ವಿಶ್ವಾಸಾರ್ಹತೆಯ ಕುರಿತು ಪರಿಶೀಲನೆ ಮಹತ್ವ ಪಡೆದುಕೊಂಡಿದೆ. ಸೈಬರ್ ಭದ್ರತಾ ಲೋಪಗಳಿಂದ ಬಳಕೆದಾರರ ಮಾಹಿತಿ ಮತ್ತು ಆನ್‌ಲೈನ್ ಸೇವೆಗಳಿಗೆ ತೊಂದರೆಯಾಗದಂತೆ ಸಂಬಂಧಿತ ಸಂಸ್ಥೆಗಳು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

# ಪ್ರತಿ ಮನೆಗೂ ಅಭಿವೃದ್ಧಿಯ ಬೆಳಕು ತಲುಪಿಸುವುದೇ ನಮ್ಮ ಸಂಕಲ್ಪ: ಸಿಎಂ

● ವಿಕ್ರಮ ವಾಹಿನಿ । ಮೈಸೂರು

ನಾಡಹಬ್ಬ ದಸರಾ ಸಂದರ್ಭದಲ್ಲಿ ದ್ವೇಷ ದೂರವಾಗಿ ಸಾಮರಸ್ಯ ಬೆಳೆಯಬೇಕು. ಅನ್ಯಾಯ ಅಳಿದು ಸಮಾನತೆ ನೆಲೆಸಬೇಕು. ರೈತರು ಮತ್ತು ಯುವಕರ ಬದುಕು ಬೆಳಗುವುದರೊಂದಿಗೆ ಅಭಿವೃದ್ಧಿಯ ಬೆಳಕು ಪ್ರತಿ ಮನೆಗೂ ತಲುಪಬೇಕು ಎಂಬುದೇ ನಮ್ಮ ಸಂಕಲ್ಪ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಮೈಸೂರಿನಲ್ಲಿ ಬುಧವಾರ ನಂದಿಧ್ವಜ ಪೂಜೆಯ ಬಳಿಕ ಮಾತನಾಡಿದ ಅವರು, ದಸರಾ ಜಂಬೂಸವಾರಿಯಲ್ಲಿ ಭಾಗಿಯಾಗಿರುವುದು ತಮ್ಮ ಬದುಕಿನ ಅಮೂಲ್ಯ ಕ್ಷಣವಾಗಿದೆ. ರಾಜ್ಯದಲ್ಲಿ ಉತ್ತಮ ಮಳೆ-ಬೆಳೆಯಾಗಿ ಜನರ ಬದುಕು ಸಮೃದ್ಧವಾಗಲಿ, ಎಲ್ಲರಿಗೂ ಸುಖ, ಶಾಂತಿ, ನೆಮ್ಮದಿ ದೊರೆಯಲಿ ಎಂದು ತಾಯಿ ಚಾಮುಂಡೇಶ್ವರಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

**ನನ್ನ ಬದುಕಿನ ಅಮೂಲ್ಯ ಕ್ಷಣ:** ನಂದಿಧ್ವಜ ಪೂಜೆ ನೆರವೇರಿಸಿ ದಸರಾ ಸಂಭ್ರಮದ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗುವ ಅವಕಾಶ ದೊರೆತಿರುವುದು ಸಂತಸ ತಂದಿದೆ. ನಾಡಿನ ಜನರ ಆಶೀರ್ವಾದದಿಂದ ಶಕ್ತಿ ದೇವತೆ ಚಾಮುಂಡೇಶ್ವರಿಯ ಮೆರವಣಿಗೆಯಲ್ಲಿ ಭಾಗವಹಿಸುವ ಭಾಗ್ಯ ಸಿಕ್ಕಿದೆ. ತಾಯಿಯ ಆಶೀರ್ವಾದವೇ ನಮ್ಮ ಶಕ್ತಿ, ಜನಸೇವೆಯೇ ನಮ್ಮ ಭಕ್ತಿ ಎಂದು ಹೇಳಿದರು.

ದಸರಾ ಸರ್ಕಾರ ಅಥವಾ ರಾಜಮನೆತನಕ್ಕೆ ಮಾತ್ರ ಸೀಮಿತವಾದ ಹಬ್ಬವಲ್ಲ; ಪ್ರಜಾಪ್ರಭುತ್ವದಲ್ಲಿ ಇದು ಎಲ್ಲರ ಹಬ್ಬವಾಗಿದೆ. ರಾಜಮನೆತನಕ್ಕೆ ಸಲ್ಲಬೇಕಾದ ಗೌರವ ಸಲ್ಲಿಸುವುದರ ಜತೆಗೆ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಆದ್ಯತೆ ನೀಡಲಾಗಿದೆ. ಕನ್ನಡ ನಾಡಿನ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದರು.

ತಾಯಿ ಚಾಮುಂಡೇಶ್ವರಿ ಈ ಬಾರಿ ಹೊಸ ಆನೆ ಪ್ರಶಾಂತದ ಮೇಲೆ ಮೆರವಣಿಗೆಯಲ್ಲಿ ಸಾಗಲಿದ್ದು, ಮುಂದಿನ ಹಲವು ವರ್ಷಗಳ ಕಾಲವೂ ತಾಯಿಯ ಸೇವೆ ಮಾಡುವ ಭಾಗ್ಯ ಆನೆಗೆ ದೊರೆಯಲಿ ಎಂದು ಹಾರೈಸಿದರು.

ಕರ್ನಾಟಕ ವಿಶ್ವದ ಗಮನ ಸೆಳೆಯುತ್ತಿದ್ದು, ಬೆಂಗಳೂರಿನಲ್ಲಿ ಹೊರರಾಜ್ಯಗಳ ಸುಮಾರು 45 ಲಕ್ಷ ಜನರು ನೆಲೆಸಿದ್ದಾರೆ. ಎಲ್ಲರನ್ನೂ ಸ್ವಾಗತಿಸುತ್ತಿದ್ದೇವೆ. ವಿಶ್ವವಿಖ್ಯಾತ ಮೈಸೂರು ದಸರಾ ವೀಕ್ಷಿಸಲು ವಿದೇಶಗಳಿಂದಲೂ ಪ್ರವಾಸಿಗರು ಆಗಮಿಸಿದ್ದು, 13 ವಿದೇಶಿ ರಾಯಭಾರಿಗಳು ಉತ್ಸವದಲ್ಲಿ ಪಾಲ್ಗೊಂಡಿದ್ದಾರೆ. ಇದರಿಂದ ಈ ಬಾರಿಯ ದಸರೆಗೆ ವಿಶೇಷ ಮೆರಗು ಬಂದಿದೆ ಎಂದು ತಿಳಿಸಿದರು.

ಯುವಕ-ಯುವತಿಯರು ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೊಗಳನ್ನು ಹಂಚಿಕೊಳ್ಳುವ ಮೂಲಕ ದಸರಾವನ್ನು ದೇಶದಾದ್ಯಂತ ಪರಿಚಯಿಸಿದ್ದಾರೆ. ಪ್ರವಾಸಿಗರ ಸಂಖ್ಯೆ ಹೆಚ್ಚಿರುವುದರಿಂದ ನಗರದ ಹಲವು ವಸತಿಗೃಹಗಳಲ್ಲಿ ಕೊಠಡಿಗಳು ಭರ್ತಿಯಾಗಿವೆ. ಸಂಚಾರ ದಟ್ಟಣೆ ಉಂಟಾಗದಂತೆ ಪೊಲೀಸ್ ಇಲಾಖೆ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಏರ್‌ಶೋ ಮತ್ತು ಕಂಬಳ ಕಾರ್ಯಕ್ರಮಗಳು ಉತ್ತಮವಾಗಿ ನಡೆದಿವೆ. ಕಾರ್ಯಕ್ರಮಗಳ ಯಶಸ್ಸಿಗೆ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರ ಸಹಕಾರ ಮುಖ್ಯ. ಮುಂದಿನ ಕಾರ್ಯಕ್ರಮಗಳನ್ನು ವೀಕ್ಷಿಸಿ ಅಭಿಪ್ರಾಯ ಹಂಚಿಕೊಳ್ಳುವಂತೆ ಮನವಿ ಮಾಡಿದ ಅವರು, ದಸರಾ ಯಶಸ್ಸಿನಲ್ಲಿ ಮಾಧ್ಯಮಗಳ ಸಹಕಾರವೂ ಮಹತ್ವದ್ದಾಗಿದೆ ಎಂದು ಹೇಳಿದರು.







ಕರ್ನಾಟಕ ಸರ್ಕಾರದ, ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಬೆಂಗಳೂರಿನ ಕನ್ನಡ ಭವನದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಧ್ವ ಜಯಂತಿ ಉತ್ಸವದಲ್ಲಿ ಮಾಜಿ ಸಚಿವ ಶಾಸಕ ದಿನೇಶ್ ಗುಂಡೂರಾವ್ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ, ಪಂ.ಪೂ.ಡಾ.ಶ್ರೀವ್ಯಾಸನಕೆರೆ ಪ್ರಭಂಜನ ಆಚಾರ್ಯ, ದ್ವೈತ ವೇದಾಂತ ಫೌಂಡೇಶನ್ ನಿರ್ದೇಶಕರು, ಶ್ರೀ ಉತ್ತರಾದಿ ಮಠದ ಪ್ರಮುಖರು ಆದ ಪಂ.ಪೂ.ಡಾ.ಶ್ರೀಸತ್ಯಧ್ಯಾನ ಆಚಾರ್ಯ ಕಟ್ಟಿ ಉದ್ಘಾಟಿಸಿ ಶ್ರೀಮಧ್ವಾಚಾರ್ಯರ ಕುರಿತು ಮಾತನಾಡಿದರು. ಅದಾದ ನಂತರ ಕರ್ನಾಟಕ ರಾಜ್ಯ ತ್ರಿಮತಸ್ಥ ಬ್ರಾಹ್ಮಣ ಮಹಾಸಭಾದ ರಾಜ್ಯಾಧ್ಯಕ್ಷರಾದ ಡಾ.ಪಂ.ಶ್ರೀ.ಪ್ರಸನ್ನಾಚಾರ್ಯ ಎಸ್ ಕಟ್ಟಿಯವರು ಜಗದ್ಗುರು ಶ್ರೀ ಮಧ್ವಾಚಾರ್ಯರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮುಖಾಂತರ ಪೂಜಾಧಿಗಳನ್ನು ನೆರವೇರಿಸಿದರು ಇದೇ ಸುಸಂದರ್ಭದಲ್ಲಿ ಮಧ್ವಾಚಾರ್ಯರ ಭಾವಚಿತ್ರದ ಮುಂದೆ ವೇದವ್ಯಾಸ ಕಟ್ಟಿ ಹಾಗೂ ವರದರಾಜ ಕಟ್ಟಿ ಶ್ರೀಮಧ್ವಾಚಾರ್ಯರ ಮಹಿಮೆ ವರ್ಣನೆ ಮಾಡುವ ಸ್ತೋತ್ರಗಳನ್ನು ಪಠಣ ಮಾಡಿ ಶ್ರೀಮಧ್ವಾಚಾರ್ಯರಿಗೆ ನಮನ ಸಲ್ಲಿಸಿದರು.

# ದಸರಾ ಜಂಬೂಸವಾರಿಯಲ್ಲಿ ಮಿಂಚಿದ 'ಅಸ್ಮಿತೆ' ಸ್ತಬ್ಧಚಿತ್ರ; ರೂ 1 ಲಕ್ಷ ಬಹುಮಾನ

● ವಿಕ್ರಮ ವಾಹಿನಿ । ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ ಜಂಬೂಸವಾರಿಯಲ್ಲಿ ಮಂಡ್ಯ ಜಿಲ್ಲಾ ಪಂಚಾಯಿತಿ ಪ್ರದರ್ಶಿಸಿದ 'ಅಸ್ಮಿತೆ-ಸ್ತ್ರೀ ಶಕ್ತಿಯ ಅನಾವರಣ' ಸ್ತಬ್ಧಚಿತ್ರವು ಗಮನ ಸೆಳೆದಿದ್ದು, ಇದರ ವಿನೂತನ ಪರಿಕಲ್ಪನೆ ಮತ್ತು ಕಲಾತ್ಮಕ ವಿನ್ಯಾಸಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರು ಸ್ತಬ್ಧಚಿತ್ರದ ತಂಡಕ್ಕೆ ತಮ್ಮ ವೈಯಕ್ತಿಕ ವತಿಯಿಂದ ರೂ 1 ಲಕ್ಷ ನಗದು ಬಹುಮಾನ ಘೋಷಿಸಿದ್ದಾರೆ.



ಮಹಿಳೆಯರ ಸಬಲೀಕರಣ, ಮಾತೃತ್ವ, ಕೃಷಿ ನಾವೀನ್ಯತೆ, ಉದ್ಯಮಶೀಲತೆ ಹಾಗೂ ಆರ್ಥಿಕ ಸ್ವಾವಲಂಬನೆಯ ವಿವಿಧ ಆಯಾಮಗಳನ್ನು ಸ್ತಬ್ಧಚಿತ್ರ ಪರಿಣಾಮಕಾರಿಯಾಗಿ ಬಿಂಬಿಸಿದೆ. ದುಡಿಯುವ ತಾಯಂದಿರ ಮಕ್ಕಳ ಆರೈಕೆಗಾಗಿ 'ವಾತ್ಸಲ್ಯ ಕೇಂದ್ರ', ಎದೆಹಾಲಿನ ಸಂಗ್ರಹಣಾ ಕೇಂದ್ರವಾದ 'ಶಿಶುಸಂಜೀವಿನಿ' ಪರಿಕಲ್ಪನೆಗಳ ಜತೆಗೆ, ಮಹಿಳೆಯರ ಸಾಧನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಸಾರಲಾಗಿದೆ.

ತಾರತಮ್ಯರಹಿತ ಅವಕಾಶ ದೊರೆತರೆ ಮಹಿಳೆಯರು ಯಾವ ಕ್ಷೇತ್ರದಲ್ಲೂ ಸಾಧನೆ ಮಾಡಬಲ್ಲರು ಎಂಬುದಕ್ಕೆ ಉದಾಹರಣೆಯಾಗಿ ಅಂಧ ಮಹಿಳೆಯರ ಭಾರತೀಯ ಕ್ರಿಕೆಟ್ ತಂಡದ ಸಾಧನೆಯನ್ನು ಚಿತ್ರಿಸಲಾಗಿದೆ. ಆಧುನಿಕ ಕೃಷಿಯಲ್ಲಿ ಡ್ರೋನ್, ಕೃತಕ ಬುದ್ಧಿಮತ್ತೆ ಹಾಗೂ ಸಮಗ್ರ ಕೃಷಿ ಪದ್ಧತಿಗಳ ಬಳಕೆ, ಸ್ವಸಹಾಯ ಸಂಘಗಳ ಉತ್ಪನ್ನಗಳ ಮೌಲ್ಯವರ್ಧನೆ, 'ಅಕ್ಕ ಕೆಫೆ'ಯಂತಹ ಉಪಕ್ರಮಗಳ ಮೂಲಕ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗುತ್ತಿರುವುದನ್ನೂ ಸ್ತಬ್ಧಚಿತ್ರ ಪರಿಚಯಿಸಿದೆ.



ಇದಲ್ಲದೆ, ಮಂಡ್ಯ ಜಿಲ್ಲೆಯಲ್ಲಿ ಮಹಿಳೆಯರ ಋತುಸ್ರಾವ ನೈರ್ಮಲ್ಯಕ್ಕೆ ಉತ್ತೇಜನ ನೀಡಲು 32 ಸಾವಿರಕ್ಕೂ ಹೆಚ್ಚು ಮುಟ್ಟಿನ ಕಪ್‌ಗಳನ್ನು ಉಚಿತವಾಗಿ ವಿತರಿಸಿರುವುದು ಸೇರಿದಂತೆ ಜಾಗೃತಿ ಕಾರ್ಯಕ್ರಮಗಳನ್ನು ಬಿಂಬಿಸಲಾಗಿದೆ.

ದಸರಾ ಪ್ರದರ್ಶನ ಮುಗಿದ ಬಳಿಕ ಸ್ತಬ್ಧಚಿತ್ರವನ್ನು ಮಂಡ್ಯ ಜಿಲ್ಲಾಡಳಿತ ಕೇಂದ್ರದಲ್ಲಿ ಪ್ರದರ್ಶನಕ್ಕಿಟ್ಟು ವಿದ್ಯಾರ್ಥಿಗಳಿಗೆ ವೀಕ್ಷಣೆಗೆ ಅವಕಾಶ ಕಲ್ಪಿಸಬೇಕು ಎಂಬ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರ ಮನವಿಗೆ ಸಚಿವ ಈಶ್ವರ ಖಂಡ್ರೆ ಸ್ಪಂದಿಸಿದ್ದಾರೆ. ಸ್ತಬ್ಧಚಿತ್ರವನ್ನು ಮಂಡ್ಯ ಜಿಲ್ಲಾಡಳಿತಕ್ಕೆ ಹಸ್ತಾಂತರಿಸುವಂತೆ ಸೂಚನೆ ನೀಡಿರುವುದಾಗಿ ಅವರು ತಿಳಿಸಿದ್ದಾರೆ. ಸ್ತಬ್ಧಚಿತ್ರದ ಸಿದ್ಧತೆಗೆ ಶ್ರಮಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಸಿಬ್ಬಂದಿ ವರ್ಗವನ್ನು ದಿನೇಶ್ ಗೂಳಿಗೌಡ ಅಭಿನಂದಿಸಿದ್ದಾರೆ. ಮಹಿಳಾ ಸಬಲೀಕರಣದ ಮಹತ್ವದ ಸಂದೇಶವನ್ನು ಸಾರುವ ಈ ಪ್ರಯತ್ನ ಶ್ಲಾಘನೀಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಧರ್ಮ, ಸಂಸ್ಕೃತಿ, ರಾಷ್ಟ್ರೀಯತೆಯೇ ನಮ್ಮ ಅಸ್ತಿತ್ವದ ಮೂಲ: ಎಸ್.ಆರ್. ವಿಶ್ವನಾಥ್

● ವಿಕ್ರಮ ವಾಹಿನಿ । ಬೆಂಗಳೂರು




ಧರ್ಮ, ಸಂಸ್ಕೃತಿ ಮತ್ತು ರಾಷ್ಟ್ರೀಯತೆಯೇ ನಮ್ಮ ಅಸ್ತಿತ್ವದ ಮೂಲವಾಗಿದ್ದು, ದೇಶದ ಸಂಪ್ರದಾಯ ಹಾಗೂ ಪರಂಪರೆಯನ್ನು ಉಳಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ಯಲಹಂಕ ಶಾಸಕ ಎಸ್. ಆರ್. ವಿಶ್ವನಾಥ್ ಹೇಳಿದರು.

ಯಲಹಂಕದ ನಮ್ಮ ಉತ್ತರ ಕರ್ನಾಟಕ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆಯೋಜಿಸಿದ್ದ ಬನ್ನಿ ಹಬ್ಬದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಗತ್ತಿಗೆ 'ವಸುಧೈವ ಕುಟುಂಬಕಂ' ಎಂಬ ವಿಶ್ವಕುಟುಂಬದ ಸಂದೇಶ ಸಾರಿದ ಹೆಮ್ಮೆ ಭಾರತದದ್ದು. ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಉಳಿಸಿಕೊಂಡಾಗ ಮಾತ್ರ ದೇಶ ಬಲಿಷ್ಠವಾಗಿರಲು ಸಾಧ್ಯ ಎಂದರು.

ಭಾರತದ ಮೇಲೆ ಅನೇಕ ಆಕ್ರಮಣಗಳು ನಡೆದಿದ್ದರೂ ಇಲ್ಲಿನ ಸಂಸ್ಕೃತಿ ಮತ್ತು ಪರಂಪರೆ ಇಂದಿಗೂ ಉಳಿದುಕೊಂಡಿದೆ. ಧರ್ಮ, ಜಾತಿ ಹಾಗೂ ಭಾಷೆಯ ಭೇದಗಳನ್ನು ಮೀರಿ ದೇಶದ ಹಿತದ ಪ್ರಶ್ನೆ ಬಂದಾಗ ಎಲ್ಲರೂ ಒಂದಾಗಿ ನಿಲ್ಲಬೇಕು. ಯುವಜನರಲ್ಲಿ ದೇಶದ ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯ ಎಂದು ತಿಳಿಸಿದರು.

ಸಮುದಾಯಗಳ ನಡುವೆ ಮೇಲು-ಕೀಳು ಎಂಬ ಭಾವನೆ ಬೆಳೆಸುವ ಬದಲು, ಸಂಸ್ಕೃತಿ ಮತ್ತು ದೇಶದ ಹಿತ ಕಾಪಾಡಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉತ್ತರ ಕರ್ನಾಟಕ ಸಂಘ-ಸಂಸ್ಥೆಗಳ ಮಹಾಸಂಸ್ಥೆಯ ಅಧ್ಯಕ್ಷ ಶಿವಕುಮಾರ್ ಮೇಟಿ, ಪ್ರಧಾನ ಕಾರ್ಯದರ್ಶಿ ಶಂಕರ ಪಾಗೋಜಿ, ಕಾರ್ಯದರ್ಶಿ ಬಸಯ್ಯ ನಂದಿಕೋಲ, ನಮ್ಮ ಉತ್ತರ ಕರ್ನಾಟಕ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಶರಣಪ್ಪ ಸಾಹುಕಾರ, ಮಾಜಿ ಅಧ್ಯಕ್ಷ ಕಲ್ಲಪ್ಪ ನವಣಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಪರಸ್ಪರ ಬನ್ನಿ ಬಂಗಾರ ವಿನಿಮಯ ಮಾಡಿಕೊಂಡು ಹಬ್ಬದ ಶುಭಾಶಯಗಳನ್ನು ಹಂಚಿಕೊಂಡರು.

# 'ರಾಜ್ಯಪಾಲರ ಅವಧಿಯಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳು ಎತ್ತಿಹಿಡಿಯಲಿ'

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ನೂತನ ರಾಜ್ಯಪಾಲರಾದ ಡಾ. ಸುಧಾ ಯಾದವ್ ಅವರ ಅಧಿಕಾರಾವಧಿಯಲ್ಲಿ ಸಾಂವಿಧಾನಿಕ ನೈತಿಕತೆ, ಒಕ್ಕೂಟ ವ್ಯವಸ್ಥೆ, ಸಾಮಾಜಿಕ ನ್ಯಾಯ ಹಾಗೂ ಪ್ರಜಾಸತ್ತಾತ್ಮಕ ಹೊಣೆಗಾರಿಕೆಯ ತತ್ವಗಳು ಮತ್ತಷ್ಟು ಬಲಗೊಳ್ಳಲಿವೆ ಎಂಬ ವಿಶ್ವಾಸವಿದೆ ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ಅಧ್ಯಕ್ಷ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯ ರಮೇಶ್ ಬಾಬು ಆಶಿಸಿದ್ದಾರೆ.



ರಾಜ್ಯಪಾಲರಿಗೆ ಬರೆದಿರುವ ಬಹಿರಂಗ ಪತ್ರದಲ್ಲಿ, ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪಂಗಡಗಳು, ಅಲ್ಪಸಂಖ್ಯಾತರು, ಮಹಿಳೆಯರು, ರೈತರು, ಕಾರ್ಮಿಕರು ಸೇರಿದಂತೆ ಎಲ್ಲ ದುರ್ಬಲ ವರ್ಗಗಳ ಹಕ್ಕು, ಘನತೆ ಮತ್ತು ಸಮಾನ ಅವಕಾಶಗಳ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಮಾಜಿ ರಾಜ್ಯಪಾಲೆ ವಿ.ಎಸ್. ರಮಾದೇವಿ ಅವರು ರಾಜಭವನವನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ಕೈಗೊಂಡಿದ್ದ ಪ್ರಯತ್ನಗಳನ್ನು ಮುಂದುವರಿಸಬೇಕು. ವಿದ್ಯಾರ್ಥಿಗಳು, ಯುವಜನರು, ಶಿಕ್ಷಣ ಸಂಸ್ಥೆಗಳು ಮತ್ತು ನಾಗರಿಕರಿಗೆ ಲೋಕಭವನದ ಇತಿಹಾಸ, ಪರಂಪರೆ ಹಾಗೂ ಸಾಂವಿಧಾನಿಕ ಮಹತ್ವ ತಿಳಿಯಲು ಅವಕಾಶ ಕಲ್ಪಿಸಬೇಕು ಎಂದು ರಮೇಶ್ ಬಾಬು ಮನವಿ ಮಾಡಿದ್ದಾರೆ.

ರೈತರು, ಕಾರ್ಮಿಕರು, ಮಹಿಳಾ ಸಂಘಟನೆಗಳು, ಸಮಾಜ ಸುಧಾರಕರು, ಅಂಚಿನಲ್ಲಿರುವ ಸಮುದಾಯಗಳ ಪ್ರತಿನಿಧಿಗಳು ಹಾಗೂ ನಾಗರಿಕ ಸಮಾಜದ ಗುಂಪುಗಳೊಂದಿಗೆ ಸಂವಾದಕ್ಕೆ ಅವಕಾಶ ಕಲ್ಪಿಸುವ ಮೂಲಕ ಜನರ ಆಶೋತ್ತರಗಳಿಗೆ ಸ್ಪಂದಿಸಬೇಕು.

ಕನ್ನಡ ಭಾಷೆ, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯ ಉತ್ತೇಜನದ ಜತೆಗೆ ವೈಜ್ಞಾನಿಕ ಮನೋಭಾವ, ಮಹಿಳಾ ಸಬಲೀಕರಣ ಹಾಗೂ ಸಾಮಾಜಿಕ ಸಾಮರಸ್ಯಕ್ಕೂ ಲೋಕಭವನ ಪ್ರೋತ್ಸಾಹ ನೀಡಬೇಕು ಎಂದು ಅವರು ಆಶಿಸಿದ್ದಾರೆ.

ರಾಜ್ಯಪಾಲರ ಅಧಿಕಾರಾವಧಿಯು ನಿಷ್ಪಕ್ಷಪಾತ, ಪಾರದರ್ಶಕತೆ ಮತ್ತು ಜನಸ್ನೇಹಿ ಆಡಳಿತದ ಸಂಕೇತವಾಗುವುದರೊಂದಿಗೆ ಸಾಂವಿಧಾನಿಕ ಸಂಸ್ಥೆಗಳ ಮೇಲಿನ ಜನರ ವಿಶ್ವಾಸವನ್ನು ಬಲಪಡಿಸಲಿ ಎಂದು ರಮೇಶ್ ಬಾಬು ತಿಳಿಸಿದ್ದಾರೆ.

# ಸಮನ್ವಯದ ಕೊರತೆ: ದಸರಾ ಜಟ್ಟಿ ಕಾಳಗ ರದ್ದು

● ವಿಕ್ರಮ ವಾಹಿನಿ । ಮೈಸೂರು

ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಖಾಸಗಿ ದರ್ಬಾರ್‌ನ ಪ್ರಮುಖ ಆಕರ್ಷಣೆಯಾಗಿದ್ದ ಐತಿಹಾಸಿಕ ಜಟ್ಟಿ ಕಾಳಗ ಈ ಬಾರಿ ಸಮನ್ವಯದ ಕೊರತೆಯಿಂದ ರದ್ದಾಗಿದೆ. ನಿಗದಿತ ಮುಹೂರ್ತ ಮೀರಿದ ಹಿನ್ನೆಲೆಯಲ್ಲಿ ಕಾಳಗ ನಡೆಸಲು ಸಾಧ್ಯವಾಗಿಲ್ಲ. ದಸರಾ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಜಟ್ಟಿ ಕಾಳಗ ರದ್ದಾಗಿರುವುದು ವಿಷಾದಕ್ಕೆ ಕಾರಣವಾಗಿದೆ.

ವಾಡಿಕೆಯಂತೆ ವಿಜಯದಶಮಿ ಜಂಬೂಸವಾರಿ ಆರಂಭಕ್ಕೂ ಮುನ್ನ ಅಖಾಡದಲ್ಲಿ ಜಟ್ಟಿ ಕಾಳಗ ನಡೆಸಲಾಗುತ್ತದೆ. ಕಾಳಗದ ಬಳಿಕ ವಿಜಯದಶಮಿ ಮೆರವಣಿಗೆಗೆ ಚಾಲನೆ ನೀಡುವುದು ಸಂಪ್ರದಾಯವಾಗಿದೆ. ಆದರೆ, ಈ ಬಾರಿ ಅಗತ್ಯ ಸಿದ್ಧತೆ ಮತ್ತು ಸಮಯದ ಹೊಂದಾಣಿಕೆ ಸಾಧ್ಯವಾಗದ ಕಾರಣ ಸಂಪ್ರದಾಯಕ್ಕೆ ತಡೆಯುಂಟಾಗಿದೆ.

ಶಮಿಪೂಜೆ ಮುಗಿಸಿ ಅರಮನೆಗೆ ಮರಳಿದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಆಗಮನದ ಬಳಿಕವೂ ಜಟ್ಟಿ ಕಾಳಗ ನಡೆಸುವ ಕುರಿತು ಪ್ರಯತ್ನಗಳು ನಡೆದವು. ರಾಜಮನೆತನದವರನ್ನು ಮನವೊಲಿಸಲು ಯತ್ನಿಸಿದರೂ ಫಲ ನೀಡಲಿಲ್ಲ ಎನ್ನಲಾಗಿದೆ. ನಿಗದಿತ ಮುಹೂರ್ತ ಮೀರಿದ್ದರಿಂದ ಅಂತಿಮವಾಗಿ ಕಾಳಗವನ್ನು ರದ್ದುಗೊಳಿಸಲಾಯಿತು.

**ಪೊಲೀಸರ ವಿರುದ್ಧ ಪೈಲ್ವಾನರ ಆಕ್ರೋಶ:** ಜಟ್ಟಿ ಕಾಳಗ ರದ್ದಾಗಿರುವುದಕ್ಕೆ ಪೊಲೀಸರ ನಿರ್ವಹಣೆಯೇ ಕಾರಣ ಎಂದು ಪೈಲ್ವಾನರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಕಾಲದಲ್ಲಿ ಅಖಾಡದೊಳಗೆ ಪ್ರವೇಶಿಸಲು ಅವಕಾಶ ನೀಡಿದ್ದರೆ ಸಿದ್ಧತೆ ಪೂರ್ಣಗೊಳಿಸಿ ನಿಗದಿತ ಸಮಯಕ್ಕೆ ಕಾಳಗ ನಡೆಸಬಹುದಿತ್ತು. ಆದರೆ, ಪೊಲೀಸರು ತಡವಾಗಿ ಪ್ರವೇಶ ಕಲ್ಪಿಸಿದ್ದರಿಂದ ಮುಹೂರ್ತ ಮೀರಿತು ಎಂದು ಆರೋಪಿಸಿದ್ದಾರೆ.

ದಸರಾ ಸಂಪ್ರದಾಯದ ಭಾಗವಾಗಿರುವ ಜಟ್ಟಿ ಕಾಳಗ ಈ ಬಾರಿ ನಡೆಯದಿರುವುದು ಕುಸ್ತಿ ಪ್ರೇಮಿಗಳು ಹಾಗೂ ಸಂಪ್ರದಾಯದ ಅಭಿಮಾನಿಗಳಲ್ಲಿ ನಿರಾಸೆ ಮೂಡಿಸಿದೆ.

# ಮುರಳೀಧರ ಮಳಗಿರಿಗೆ ಮಾತೃ ವಿಯೋಗ

● ವಿಕ್ರಮ ವಾಹಿನಿ । ಹುಬ್ಬಳ್ಳಿ



ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಆಪ್ತ ಕಾರ್ಯದರ್ಶಿ ಮುರಳೀಧರ ಮಳಗಿ ಅವರ ತಾಯಿ ರಮಾಬಾಯಿ ಮಳಗಿ (93) ಅವರು ವಯೋಸಹಜ ಅನಾರೋಗ್ಯದಿಂದ ಅ. 18ರಂದು ನಿಧನರಾದರು. ಮೃತರು ನಾಲ್ವರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ರಮಾಬಾಯಿ ಅವರ ನಿಧನಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಶಾಸಕರಾದ ಮಹೇಶ್ ಟೆಂಗಿನಕಾಯಿ, ಎಂ.ಆರ್. ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯ ಲಿಂಗರಾಜ ಪಾಟೀಲ ಸಂತಾಪ ಸೂಚಿಸಿದ್ದಾರೆ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಕುಟುಂಬದವರಿಗೆ ದುಃಖ ಭರಿಸುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

# ತಪಾಸಣೆ ವಿಳಂಬಕ್ಕೆ ಕಡಿವಾಣ: ಖಾಸಗಿ ಏಜೆನ್ಸಿಗಳ ಸೇವೆಗೆ ಸರ್ಕಾರದ ಆದೇಶ

1ನೇ ಪುಟದಿಂದ

ಖಾಸಗಿ ಸಂಸ್ಥೆಗಳ ಕಾರ್ಯನಿರ್ವಹಣೆಯ ಗುಣಮಟ್ಟ ಖಚಿತಪಡಿಸಿಕೊಳ್ಳಲು ಇಲಾಖಾ ಅಧಿಕಾರಿಗಳು ಅನಿರೀಕ್ಷಿತ ಸ್ಥಳ ಪರಿಶೀಲನೆ ನಡೆಸಲಿದ್ದಾರೆ. ವರದಿಗಳಲ್ಲಿ ಲೋಪ, ನಿರ್ಲಕ್ಷ್ಯ ಅಥವಾ ಅಕ್ರಮ ಕಂಡುಬಂದರೆ ಸಂಬಂಧಿತ ಏಜೆನ್ಸಿಗಳನ್ನು ಕಪ್ಪುಪಟ್ಟಿಗೆ ಸೇರಿಸುವುದು ಸೇರಿದಂತೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ.

**ಕಾಲಮಿತಿಯಲ್ಲಿ ಕ್ರಿಯಾ ಯೋಜನೆ:** ಏಜೆನ್ಸಿಗಳ ಆಯ್ಕೆ, ಅರ್ಹತಾ ಮಾನದಂಡಗಳು ಮತ್ತು ಅನುಷ್ಠಾನದ ರೂಪುರೇಷೆಗಳನ್ನು ಒಳಗೊಂಡ ಕಾಲಮಿತಿಯ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಆಯಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ. ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ನಡೆಯುವ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿಯೂ ಈ ವಿಷಯದ ಕುರಿತು ವಿಶೇಷವಾಗಿ ಚರ್ಚೆ ನಡೆಯಲಿದೆ.

ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 (ಕೆಎಆರ್‌ಸಿ-2) ನೀಡಿದ ಶಿಫಾರಸಿನ ಆಧಾರದ ಮೇಲೆ ಪ್ರಜಾಸೇವಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ ಅವರು ಈ ಸಂಬಂಧ ಸರ್ಕಾರದ ಆದೇಶ ಹೊರಡಿಸಿದ್ದಾರೆ.

ಸಿಬ್ಬಂದಿ ಕೊರತೆಯಿಂದ ಬಾಕಿಯಾಗಿರುವ ತಪಾಸಣೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವುದರ ಜತೆಗೆ, ನಿಯಂತ್ರಣ ವ್ಯವಸ್ಥೆಯ ಕಾರ್ಯಕ್ಷಮತೆ ಹೆಚ್ಚಿಸುವುದು ಈ ಕ್ರಮದ ಪ್ರಮುಖ ಉದ್ದೇಶವಾಗಿದೆ. ಈ ಕ್ರಮದಿಂದ ಕೈಗಾರಿಕೆಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರ ನಿಯಂತ್ರಿತ ವಲಯಗಳಲ್ಲಿ ನಿಗದಿತ ಅವಧಿಗೆ ತಪಾಸಣೆ ನಡೆಸಲು ಅನುಕೂಲವಾಗಲಿದೆ. ಖಾಸಗಿ ಏಜೆನ್ಸಿಗಳ ಹೊಣೆಗಾರಿಕೆ ನಿಗದಿಪಡಿಸುವುದರ ಜತೆಗೆ, ತಪಾಸಣಾ ವರದಿಗಳ ಗುಣಮಟ್ಟ ಮತ್ತು ವಿಶ್ವಾಸಾರ್ಹತೆಯನ್ನು ಹೆಚ್ಚಿಸಿ ಆಡಳಿತದಲ್ಲಿ ಪಾರದರ್ಶಕತೆ ತರುವ ನಿರೀಕ್ಷೆಯಿದೆ.





ಸಿಎಂ ಡಿ ಕೆ ಶಿವಕುಮಾರ್ ಅವರು ಮೈಸೂರಿನ ಸುತ್ತೂರು ಮಠಕ್ಕೆ ಬುಧವಾರ ಭೇಟಿ ನೀಡಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಅವರ ಆಶೀರ್ವಾದ ಪಡೆದರು. ನಂತರ ಹೋಮದಲ್ಲಿ ಪಾಲ್ಗೊಂಡರು. ಬಳಿಕ ಬರಹಗಾರ ಜಿ ಎಲ್ ತ್ರಿಪುರಾಂತಕ ಅವರು ಬರೆದಿರುವ 'ಆಸೆಗಳ ಬದಿಗೊತ್ತಿ, ಕನಸುಗಳ ಬೆನ್ನುಹತ್ತಿ' ಪುಸ್ತಕ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಸಚಿವ ನರೇಂದ್ರ ಸ್ವಾಮಿ, ಬಸವಂತಪ್ಪ, ಬಾಲಕೃಷ್ಣ, ಶಾಸಕ ಎ ಆರ್ ಕೃಷ್ಣಮೂರ್ತಿ ಅವರು ಇದ್ದರು.

# ದಸರಾ ವೀಕ್ಷಣೆ ಮಾಡುತ್ತಿರುವ ಎಲ್ಲರಿಗೂ ತಾಯಿ ಚಾಮುಂಡಿ ಒಳ್ಳೆಯದು ಮಾಡಲಿ: ಡಿಕೆಶಿ

● ವಿಕ್ರಮ ವಾಹಿನಿ । ಮೈಸೂರು

"ದೇಶ-ವಿದೇಶಗಳಿಂದ ವೈಭವದ ಮೈಸೂರು ದಸರಾ ವೀಕ್ಷಣೆ ಮಾಡುತ್ತಿರುವ ಎಲ್ಲರಿಗೂ ತಾಯಿ ಚಾಮುಂಡೇಶ್ವರಿಯ ಅನುಗ್ರಹ ದೊರೆತು, ದುಃಖ ನಿರವಾರಣೆಯಾಗಲಿ" ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಮೈಸೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಬುಧವಾರ ಪ್ರತಿಕ್ರಿಯೆ ನೀಡಿದರು.

"ಯುವಕರು-ಯುವತಿಯರು ರೀಲ್ ಗಳನ್ನು ಮಾಡಿ ಇಡೀ ದೇಶಕ್ಕೆ ದಸರಾ ಪರಿಚಯ ಮಾಡಿಕೊಟ್ಟಿದ್ದಾರೆ. ದಸರಾ ವೀಕ್ಷಣೆಗೆ ಆಗಮಿಸಿರುವ ಎಷ್ಟೋ ಮಂದಿಗೆ ರೂಮುಗಳು ಸಿಗುತ್ತಿಲ್ಲ ಎನ್ನುವ ಮಾಹಿತಿ ಬಂದಿದೆ. ಎಲ್ಲಕಡೆ ರೂಮುಗಳು ಭರ್ತಿಯಾಗಿವೆ. ಎಲ್ಲೂ ಕೂಡ ಸಂಚಾರ ದಟ್ಟಣೆ ಆಗದಂತೆ ನಮ್ಮ ಪೊಲೀಸ್ ಇಲಾಖೆ ದಕ್ಷತೆಯಿಂದ ಕೆಲಸ ಮಾಡುತ್ತಿದೆ" ಎಂದರು.

"ಏರ್ ಶೋ, ಕಂಬಳ ಬಹಳ ಚೆನ್ನಾಗಿ ಆಗಿದೆ ಎಂದು ನಮ್ಮ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಿಳಿಸಿದ್ದಾರೆ. ಯಶಸ್ಸಿಗೆ ಎಲ್ಲರ ಸಹಕಾರ ಮುಖ್ಯ. ಇನ್ನು ಮುಂದೆ ನಡೆಯುವ ಕಾರ್ಯಕ್ರಮಗಳನ್ನು ನೋಡಿ, ಅಭಿಪ್ರಾಯವನ್ನು ತಿಳಿಸಿ.

ಮಾಧ್ಯಮ ಪ್ರತಿನಿಧಿಗಳಿಗೆ ದಸರಾ ಒಳ್ಳೆಯದು ಮಾಡಲಿ. ನಿಮ್ಮ ಸಹಕಾರ ಇದಕ್ಕೆ ಬಹಳ ಮುಖ್ಯ" ಎಂದು ಹೇಳಿದರು.

# ಜಂಬೂಸವಾರಿಗೂ ಮುನ್ನ ಆನೆಗಳಿಗೆ 30 ದಿನಗಳ ತಾಲೀಮು ಕಡ್ಡಾಯ

● ವಿಕ್ರಮ ವಾಹಿನಿ । ಬೆಂಗಳೂರು

ಶಿವಮೊಗ್ಗ ದಸರಾ ಜಂಬೂಸವಾರಿ ವೇಳೆ ಬೆಳ್ಳಿ ಅಂಬಾರಿ ಹೊತ್ತಿದ್ದ ಸೋಮಣ್ಣ ಆನೆ ಬೆದರಿ ಓಡಿದ ಘಟನೆಯ ಬೆನ್ನಲ್ಲೇ ಎಚ್ಚೆತ್ತಿರುವ ರಾಜ್ಯ ಸರ್ಕಾರ, ಮುಂದಿನ ವರ್ಷದಿಂದ ದಸರಾ ಜಂಬೂಸವಾರಿಯಲ್ಲಿ ಪಾಲ್ಗೊಳ್ಳುವ ಆನೆಗಳಿಗೆ ಕನಿಷ್ಠ 20ರಿಂದ 30 ದಿನಗಳ ಕಾಲ ಕಡ್ಡಾಯ ತಾಲೀಮು ನಡೆಸುವಂತೆ ಅರಣ್ಯ ಇಲಾಖೆಗೆ ಸೂಚನೆ ನೀಡಿದೆ.

ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವ ರಾಮಲಿಂಗ ರೆಡ್ಡಿ ಅವರು ಈ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

ನುರಿತ ಮಾವುತರು ಮತ್ತು ಕಾವಾಡಿಗರ ನೇತೃತ್ವದಲ್ಲಿ ಆನೆಗಳಿಗೆ ನಿರಂತರ ತರಬೇತಿ ನೀಡಬೇಕು ಎಂದು ಸೂಚಿಸಿದ್ದಾರೆ.

ಶಿವಮೊಗ್ಗ ಜಂಬೂಸವಾರಿ ವೇಳೆ ನಡೆದ ಅವಘಡದ ಕುರಿತು ಸಚಿವರು ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿ ಮಾಹಿತಿ ಪಡೆದರು. ಆನೆ ಬೆದರಿ ಓಡಲು ಕಾರಣವೇನು, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿತ್ತೇ, ಸಾರ್ವಜನಿಕರಿಗೆ ಅಪಾಯ ಉಂಟಾಗಿದೆಯೇ ಹಾಗೂ ವಾಹನಗಳಿಗೆ ಹಾನಿಯಾಗಿದೆಯೇ ಎಂಬ ಬಗ್ಗೆ ವಿವರಗಳನ್ನು ಕೇಳಿದರು.

## ಜನಸಂದಣಿಗೆ ಹೊಂದಿಕೊಳ್ಳುವಂತೆ ತರಬೇತಿ



ದಸರಾ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವ ಉತ್ಸವಗಳಲ್ಲಿ ಪಾಲ್ಗೊಳ್ಳುವ ಆನೆಗಳಿಗೆ ಮುಂಚಿತವಾಗಿಯೇ ಸೂಕ್ತ ತರಬೇತಿ ನೀಡುವುದು ಅಗತ್ಯ. ಜನಸಂದಣಿ, ವಾದ್ಯಗಳ ಸದ್ದು ಮತ್ತು ಮೆರವಣಿಗೆಯ ವಾತಾವರಣಕ್ಕೆ ಆನೆಗಳು ಹೊಂದಿಕೊಳ್ಳುವಂತೆ ಸಿದ್ಧಪಡಿಸಬೇಕು ಎಂದು ಸಚಿವರು ಸೂಚಿಸಿದ್ದಾರೆ.

ಆನೆಗಳ ಆರೋಗ್ಯ, ಮಾನಸಿಕ ಸ್ಥಿತಿ ಮತ್ತು ತರಬೇತಿಯ ಗುಣಮಟ್ಟವನ್ನು ಪರಿಶೀಲಿಸಬೇಕು. ಜಂಬೂಸವಾರಿಗೆ ನಿಯೋಜಿಸುವ ಪ್ರತಿ ಆನೆಯ ಸಾಮರ್ಥ್ಯ ಹಾಗೂ ಸಿದ್ಧತೆಯನ್ನು ಸಮಗ್ರವಾಗಿ ಮೌಲ್ಯಮಾಪನ ಮಾಡಿದ ಬಳಿಕವೇ ಮೆರವಣಿಗೆಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಬೇಕು. ಜನಸಂದಣಿ ನಿಯಂತ್ರಣ ಮತ್ತು ಸಾರ್ವಜನಿಕರ ಸುರಕ್ಷತೆಗೂ ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

ದಸರಾ ಜಂಬೂಸವಾರಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮಹತ್ವದ ಆಚರಣೆಯಾಗಿದ್ದು, ಇಂತಹ ಸಂದರ್ಭಗಳಲ್ಲಿ ಆನೆಗಳು ಬೆದರಿ ಓಡುವ ಘಟನೆಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸುವುದರ ಜತೆಗೆ ಸಂಪ್ರದಾಯದ ಆಚರಣೆಗೂ ಅಡ್ಡಿಯಾಗುತ್ತವೆ. ಹೀಗಾಗಿ, ಮುಂದಿನ ದಿನಗಳಲ್ಲಿ ಯಾವುದೇ ಅಚಾತುರ್ಯ ಸಂಭವಿಸದಂತೆ ಅಧಿಕಾರಿಗಳು ಹೆಚ್ಚಿನ ಜಾಗ್ರತೆ ವಹಿಸಬೇಕು ಎಂದು ರಾಮಲಿಂಗ ರೆಡ್ಡಿ ಸೂಚಿಸಿದ್ದಾರೆ.

# ದೆಹಲಿಯಲ್ಲಿ 23ರಂದು ಕಿತ್ತೂರು ಚೆನ್ನಮ್ಮ ವಿಜಯೋತ್ಸವ

● ವಿಕ್ರಮ ವಾಹಿನಿ । ನವದೆಹಲಿ

ಕನ್ನಡದ ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮ ಅವರ 202ನೇ ವಿಜಯೋತ್ಸವವನ್ನು ಅ. 23ರಂದು ನವದೆಹಲಿಯ ಸಂಸತ್ತಿನ ಆವರಣದಲ್ಲಿರುವ ಪ್ರೇರಣಾ ಸ್ಥಳದಲ್ಲಿ ಆಚರಿಸಲಾಗುವುದು. ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರ ನೇತೃತ್ವದಲ್ಲಿ ಬೆಳಿಗ್ಗೆ ಕಾರ್ಯಕ್ರಮ ಆಯೋಜಿಸಲಾಗಿದೆ.

ದೆಹಲಿಯಲ್ಲಿ ಕನ್ನಡದ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಕಳೆದ ಮೂರು ವರ್ಷಗಳಿಂದ ಸಂಸತ್ತಿನ ಆವರಣದಲ್ಲಿ ಬಸವೇಶ್ವರ ಹಾಗೂ ರಾಣಿ ಚೆನ್ನಮ್ಮ ಅವರ ಜಯಂತಿಗಳನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಈ ಬಾರಿಯೂ ರಾಣಿ ಚೆನ್ನಮ್ಮ ಅವರ ದೇಶಪ್ರೇಮ, ಸ್ವಾತಂತ್ರ್ಯ ಹೋರಾಟ ಮತ್ತು ಸಾಹಸವನ್ನು ಸ್ಮರಿಸಿ ಪುಷ್ಪಾರ್ಚನೆ ಸಲ್ಲಿಸಲಾಗುವುದು.



ಕಾರ್ಯಕ್ರಮಕ್ಕೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಎಚ್.ಡಿ. ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹಾಗೂ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಆಹ್ವಾನಿಸಲಾಗಿದೆ ಎಂದು ವಿ. ಸೋಮಣ್ಣ ತಿಳಿಸಿದ್ದಾರೆ.

ಕರ್ನಾಟಕದಿಂದ ರಾಣಿ ಚೆನ್ನಮ್ಮ ಅವರ ಅಭಿಮಾನಿಗಳು, ಮಠಾಧೀಶರು ಹಾಗೂ ದೆಹಲಿಯ ಕನ್ನಡಿಗರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ರಾಷ್ಟ್ರ ಮತ್ತು ನಾಡಿನ ಅಭಿವೃದ್ಧಿಗೆ ಕೊಡುಗೆ ನೀಡಿದ ಕನ್ನಡದ ಮಹನೀಯರನ್ನು ದೆಹಲಿಯಲ್ಲಿಯೂ ಸ್ಮರಿಸುವ ಪರಂಪರೆಯನ್ನು ಮುಂದುವರಿಸಲಾಗುವುದು ಎಂದು ಸೋಮಣ್ಣ ಹೇಳಿದ್ದಾರೆ.

ಸಂಸತ್ತಿನ ಆವರಣದಲ್ಲಿ ಇಂತಹ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ. ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುತ್ತಿರುವ ಲೋಕಸಭೆ ಹಾಗೂ ರೈಲ್ವೆ ಸಚಿವಾಲಯದ ಅಧಿಕಾರಿಗಳನ್ನೂ ಸ್ಮರಿಸಿದ್ದಾರೆ.

# ಎನ್.ಆರ್. ಕಾಲೋನಿಯಲ್ಲಿ ಭಗವದ್ಗೀತಾ ಜ್ಞಾನಸತ್ರ

● ವಿಕ್ರಮ ವಾಹಿನಿ । ಬೆಂಗಳೂರು

ಇಲ್ಲಿನ ಎನ್.ಆರ್ ಕಾಲೋನಿ ಶ್ರೀ ರಾಮಮಂದಿರದಲ್ಲಿ ಶ್ರೀ ರಾಮಮಂದಿರಂ ಟ್ರಸ್ಟ್ 90ನೇ ವರ್ಷದ ಸಂಭ್ರಮಾಚರಣೆಯ ಅಂಗವಾಗಿ 'ಭಗವದ್ಗೀತಾ ಜ್ಞಾನಸತ್ರ" ಕಾರ್ಯಕ್ರಮವನ್ನು ಇಂದು ಅ. 22 ರಂದು ಸಂಜೆ ಹಮ್ಮಿಕೊಳ್ಳಲಾಗಿದೆ.

ಶ್ರೀ ರಾಮಮಂದಿರಂ ಟ್ರಸ್ಟ್ ಆವರಣದಲ್ಲಿ ಜರುಗಲಿರುವ ಕಾರ್ಯಕ್ರಮದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಮಾಜಿ ಕುಲಪತಿ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ್ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಎನ್. ರಘುನಾಥ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಡಾ. ನಂದಿನಿ ದೇವಿ ಅವರು ದೀಪಪ್ರಜ್ವಲನೆ ನೆರವೇರಿಸಲಿದ್ದಾರೆ.

ಟ್ರಸ್ಟ್ 1917ರಲ್ಲಿ ಸ್ಥಾಪನೆಯಾಗಿ ಧಾರ್ಮಿಕ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಕ್ಷೇತ್ರಗಳಲ್ಲಿ ತನ್ನದೇ ಆದ ಸೇವೆಯನ್ನು ಸಲ್ಲಿಸುತ್ತಾ ಬಂದಿದೆ. ಟ್ರಸ್ಟ್



90ನೇ ವರ್ಷದ ಸಂಭ್ರಮಾಚರಣೆಯ ಅಂಗವಾಗಿ ಭಗವದ್ಗೀತೆಯ ಅಮೂಲ್ಯ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸುವ ಸದುದ್ದೇಶದಿಂದ ವಿಶೇಷ ಆಧ್ಯಾತ್ಮಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ವಿದ್ವಾನ್ ಡಾ.ಪಾವಗಡ ಪ್ರಕಾಶರಾಯರ ವಿದ್ವತ್ಪೂರ್ಣ ಉಪನ್ಯಾಸಗಳ ಮೂಲಕ ಭಗವದ್ಗೀತೆಯ 18 ಆಧ್ಯಾಯಗಳ ತಾತ್ವಿಕ ಸಾರ ಜೀವನದ ಮೌಲ್ಯಗಳು ಹಾಗೂ ಕರ್ತವ್ಯನಿಷ್ಠೆಯ ಮಹತ್ವವನ್ನು ವಿವರಿಸಲಿದ್ದಾರೆ. ಆರು ಹಂತಗಳಲ್ಲಿ ಮೊದಲ ಹಂತದ ಈ ಉಪನ್ಯಾಸ ಮಾಲಿಕೆಯು 18 ದಿನಗಳ ಕಾಲ, ಸಂಜೆ ಮೆರವಣಿಗೆ ನ. 9, 2026ರವರೆಗೆ ನಡೆಯಲಿದೆ.

ಭಗವದ್ಗೀತೆಯು ಮಾನವನಿಗೆ ಮಾನಸಿಕ ಸ್ಥೈರ್ಯ ಸಮಚಿತ್ತತೆ, ಆತ್ಮವಿಶ್ವಾಸ ಮತ್ತು ಧರ್ಮಬದ್ಧ ಜೀವನದ ಮಾರ್ಗದರ್ಶನ ನೀಡುವ ವಿಶ್ವಮಾನವೀಯ ಗ್ರಂಥವಾಗಿದೆ.

ಇವರ ತತ್ವಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ವ್ಯಕ್ತಿತ್ವ ವಿಕಸನ, ನೈತಿಕ ಮೌಲ್ಯಗಳ ಬೆಳವಣಿಗೆ ಹಾಗೂ ಸಮಾಜದಲ್ಲಿ ಸಾಮರಸ್ಯವನ್ನು ಉತ್ತೇಜಿಸುವುದು ಈ ಜ್ಞಾನಸತ್ರದ ಪ್ರಮುಖ ಉದ್ದೇಶವಾಗಿದೆ.

ಸಾರ್ವಜನಿಕರು, ಭಕ್ತರು, ವಿದ್ಯಾರ್ಥಿಗಳು ಹಾಗೂ ಜ್ಞಾನಾಸಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಗವದ್ಗೀತೆಯ ಅಮೃತ ಸಂದೇಶದಿಂದ ಪ್ರಯೋಜನ ಪಡೆಯುವಂತೆ ಟ್ರಸ್ಟ್ ಅಧ್ಯಕ್ಷರಾದ ಆದಿತ್ಯ ಪ್ರಕಾಶ್ ಅವರು ಕೋರಿದ್ದಾರೆ.

# ಕರಾವಳಿಯಿಂದ ಸ್ಪರ್ಧಿಸಿ, ಗೆದ್ದು ತೋರಿಸುತ್ತೇವೆ: ಕುಮಾರಸ್ವಾಮಿಗೆ ಬೆಂಬಲ

● ವಿಕ್ರಮ ವಾಹಿನಿ । ಬೆಂಗಳೂರು

ಸ್ಟಿಂಗ್ ಆಪರೇಷನ್ ವಿಚಾರವಾಗಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ನಡುವಿನ ವಾಕ್ಸಮರ ತೀವ್ರಗೊಂಡಿರುವ ಬೆನ್ನಲ್ಲೇ, ಕರಾವಳಿ ಭಾಗದ ಜನರು ಕುಮಾರಸ್ವಾಮಿ ಪರ ಬ್ಯಾನರ್‌ಗಳನ್ನು ಹಾಕಿ ಪ್ರಿಯಾಂಕ್ ಖರ್ಗೆಗೆ ಸವಾಲು ಹಾಕಿದ್ದಾರೆ.

'ಕುಮಾರಣ್ಣ ಕರಾವಳಿಯಿಂದ ಸ್ಪರ್ಧಿಸಿ, ನಾವು ಗೆಲ್ಲಿಸುತ್ತೇವೆ' ಎಂಬ ಸಂದೇಶದೊಂದಿಗೆ ಹಾಕಿರುವ ಬ್ಯಾನರ್‌ಗಳಲ್ಲಿ, ಪ್ರಿಯಾಂಕ್ ಖರ್ಗೆ ಹಾಕಿರುವ ಸವಾಲನ್ನು ಕರಾವಳಿಯ ಕನ್ನಡಿಗರು ಮತ್ತು ತುಳುವರು ಸ್ವೀಕರಿಸಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ಕುಮಾರಸ್ವಾಮಿ ಅವರು ಕೇವಲ ಒಂದು ಕ್ಷೇತ್ರ ಅಥವಾ ಜಿಲ್ಲೆಗೆ ಸೀಮಿತವಾದ ನಾಯಕರಲ್ಲ; ಇಡೀ ನಾಡಿಗೆ ಬೇಕಾದ ಜನನಾಯಕ ಎಂಬುದನ್ನು ಸಾಬೀತುಪಡಿಸಲು ಕರಾವಳಿಯ ಜನರು ಸಿದ್ಧರಿದ್ದಾರೆ ಎಂದು ಹೇಳಲಾಗಿದೆ.

ಕರಾವಳಿ ಭಾಗವು ದಶಕಗಳಿಂದ ಭಾವನಾತ್ಮಕ ಮತ್ತು ರಾಜಕೀಯ ಸಂಘರ್ಷಗಳಿಗೆ ಸೀಮಿತವಾಗಿದ್ದು, ಮೀನುಗಾರರ ಸಮಸ್ಯೆ, ಅಡಿಕೆ ಬೆಳೆಗಾರರ ಸಂಕಷ್ಟ, ಯುವಜನರ ನಿರುದ್ಯೋಗ ಹಾಗೂ ಅಭಿವೃದ್ಧಿ ವಿಚಾರಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ ಎಂದು ಬ್ಯಾನರ್‌ನಲ್ಲಿ ಅಸಮಾಧಾನ ವ್ಯಕ್ತಪಡಿಸಲಾಗಿದೆ.

ದ್ವೇಷದ ರಾಜಕಾರಣಕ್ಕಿಂತ ಅಭಿವೃದ್ಧಿಪರ, ದೂರದೃಷ್ಟಿಯುಳ್ಳ ಹಾಗೂ ಎಲ್ಲರನ್ನೂ ಸಮಾನವಾಗಿ ಕಾಣುವ ನಾಯಕತ್ವದ ಅಗತ್ಯವಿದೆ. ಕುಮಾರಸ್ವಾಮಿ ಅವರ ಜನಪರ ಆಡಳಿತದ ಶೈಲಿ ಕರಾವಳಿಯ ಜನರಿಗೂ ಇಷ್ಟವಾಗಿದೆ. ಹೀಗಾಗಿ ಅವರು ಕರಾವಳಿಯ ಯಾವುದೇ ಕ್ಷೇತ್ರದಿಂದ ಸ್ಪರ್ಧಿಸಿದರೂ ಗೆಲ್ಲಿಸುವುದಾಗಿ ಬ್ಯಾನರ್ ಮೂಲಕ ಬೆಂಬಲಿಗರು ಘೋಷಿಸಿದ್ದಾರೆ.

# *ನಿರ್ಮಾಣ ಹಂತದ ಕಟ್ಟಡದಲ್ಲಿ ನಿಗೂಢ ಸ್ಫೋಟ: ಇಬ್ಬರು ಕಾರ್ಮಿಕರಿಗೆ ಗಾಯ*

1ನೇ ಪುಟದಿಂದ

*ಘಟನಾ ಸ್ಥಳದಲ್ಲಿ ಸ್ಫೋಟಕ್ಕೆ ಸಂಬಂಧಿಸಿರಬಹುದಾದ ಕೆಲವು ಶಂಕಿತ ವಸ್ತುಗಳು ಪತ್ತೆಯಾಗಿದ್ದು, ಅವುಗಳ ಮಾದರಿಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಕಳುಹಿಸಲಾಗಿದೆ. ಬ್ಯಾಗ್‌ನಲ್ಲಿದ್ದ ವಸ್ತು ಬ್ಯಾಟರಿಗೆ ಸಂಬಂಧಿಸಿದ್ದೇ, ರಾಸಾಯನಿಕ ಕ್ರಿಯೆಯಿಂದ ಸ್ಫೋಟ ಸಂಭವಿಸಿದೆಯೇ ಅಥವಾ ಸುಧಾರಿತ ಸ್ಫೋಟಕ ಸಾಧನ (ಐಇಡಿ) ಬಳಕೆಯಾಗಿದೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಎಫ್‌ಎಸ್‌ಎಲ್ ವರದಿ ಬಂದ ಬಳಿಕ ಸ್ಫೋಟದ ನಿಖರ ಕಾರಣ ತಿಳಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.*

*ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದು, ಕಟ್ಟಡದ ಮಾಲೀಕರು ಮತ್ತು ಗುತ್ತಿಗೆದಾರರ ವಿಚಾರವಾಗಿಯೂ ತನಿಖೆ ನಡೆಸುತ್ತಿದ್ದಾರೆ. ಬ್ಯಾಗ್ ಅನ್ನು ಅಲ್ಲಿಟ್ಟವರು ಯಾರು, ಅದರೊಳಗೆ ಏನಿತ್ತು, ಸ್ಫೋಟ ಆಕಸ್ಮಿಕವೇ ಅಥವಾ ಉದ್ದೇಶಪೂರ್ವಕ ಕೃತ್ಯವೇ ಎಂಬ ಆಯಾಮಗಳಲ್ಲಿ ತನಿಖೆ ಮುಂದುವರಿದಿದೆ. ಸ್ಫೋಟಕ್ಕೆ ಕಾರಣವಾಗಿರಬಹುದಾದ ವಸ್ತುಗಳನ್ನು ಎರಡು ದಿನಗಳ ಹಿಂದೆಯೇ ಕಟ್ಟಡಕ್ಕೆ ತರಲಾಗಿತ್ತೇ ಎಂಬ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ.*

*ಘಟನೆ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವರು, ಸ್ಫೋಟದ ನಿಖರ ಕಾರಣ ಪತ್ತೆಹಚ್ಚಲು ತನಿಖೆ ನಡೆಯುತ್ತಿದೆ. ವಿಧಿವಿಜ್ಞಾನ ವರದಿ ಬಂದ ಬಳಿಕ ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ. ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದು ಮನವಿ ಮಾಡಿದ್ದಾರೆ. ಮೈಸೂರು ದಸರಾ ಹಿನ್ನೆಲೆಯಲ್ಲಿ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿರುವ ಸಂದರ್ಭದಲ್ಲಿ ಈ ಘಟನೆ ಆತಂಕ ಮೂಡಿಸಿದೆ. ಸ್ಫೋಟದ ಹಿಂದಿನ ನೈಜ ಕಾರಣವನ್ನು ಪತ್ತೆಹಚ್ಚಲು ಪೊಲೀಸರು ಮತ್ತು ಸಂಬಂಧಿತ ತನಿಖಾ ತಂಡಗಳು ಸಾಕ್ಷ್ಯಾಧಾರಗಳನ್ನು ಪರಿಶೀಲಿಸುತ್ತಿವೆ.*

# ಪುಲಿಕೇಶಿನಗರ ಸ್ಫೋಟ: ಐಇಡಿ ಶಂಕೆ, ತನಿಖೆಗೆ ವಿಶೇಷ ತಂಡ

1ನೇ ಪುಟದಿಂದ

ಅಕ್ಟೋಬರ್ 20ರಂದು ಮಧ್ಯಾಹ್ನ ಸುಮಾರು 2.30ರ ವೇಳೆಗೆ ಪುಲಿಕೇಶಿನಗರದ ಐದಂತಸ್ತಿನ ಕಟ್ಟಡದಲ್ಲಿ ಸ್ಫೋಟ ಸಂಭವಿಸಿತ್ತು. ಬ್ಯಾಟರಿ ಚಾಲನೆ ಮಾಡುವ ಸಂದರ್ಭದಲ್ಲಿ ಸ್ಫೋಟ ಸಂಭವಿಸಿದೆ ಎನ್ನಲಾಗಿದ್ದು, ಅಲ್ಲಾವುದ್ದೀನ್ ಮತ್ತು ನರೇಶ್ ಎಂಬ ಇಬ್ಬರು ಕಾರ್ಮಿಕರು ಗಾಯಗೊಂಡಿದ್ದರು. ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಸ್ಫೋಟಕ್ಕೆ ಕಾರಣವಾದ ವಸ್ತು ಕಟ್ಟಡಕ್ಕೆ ಹೇಗೆ ಬಂದಿತು, ಅದನ್ನು ಯಾರು ತಂದಿಟ್ಟಿದ್ದರು ಹಾಗೂ ಘಟನೆಯ ಹಿಂದೆ ಯಾರಾದರೂ ಇದ್ದಾರೆಯೇ ಎಂಬ ಆಯಾಮಗಳಲ್ಲಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಸ್ಥಳದಲ್ಲಿನ ಸಾಕ್ಷ್ಯಗಳು, ಸಂಗ್ರಹಿಸಿದ ಮಾದರಿಗಳು ಮತ್ತು ಇತರ ಮಾಹಿತಿಗಳನ್ನು ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವಿಶೇಷ ತಂಡಗಳು ಪ್ರಕರಣದ ವಿವಿಧ ಆಯಾಮಗಳನ್ನು ಪರಿಶೀಲಿಸುತ್ತಿವೆ.

# ಖಾಸಗಿ ಆಸ್ಪತ್ರೆಗಳಿಗೆ ಹೊಸ ನಿಯಮ: ನ. 1ರಿಂದ ಜಾರಿ

● ವಿಕ್ರಮ ವಾಹಿನಿ । ಬೆಂಗಳೂರು

ಆಸ್ಪತ್ರೆಗಳ ಬಿಲ್ಲಿಂಗ್ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಆರೋಗ್ಯ ಇಲಾಖೆ ಹೊಸ ನಿಯಮಗಳನ್ನು ಜಾರಿಗೆ ತರಲು ಮುಂದಾಗಿದೆ. ನವೆಂಬರ್ 1ರಿಂದ ಆಸ್ಪತ್ರೆಗಳು ಚಿಕಿತ್ಸೆಗಳ ದರಪಟ್ಟಿಯನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸುವುದರ ಜತೆಗೆ, ಔಷಧಗಳ ಖರೀದಿ ಬೆಲೆ ಮತ್ತು ಗರಿಷ್ಠ ಚಿಲ್ಲರೆ ಮಾರಾಟ ಬೆಲೆಯನ್ನು (ಎಂಆರ್‌ಪಿ) ರೋಗಿಗಳಿಗೆ ನೀಡುವ ಬಿಲ್‌ನಲ್ಲಿ ನಮೂದಿಸಬೇಕು.

ಔಷಧಗಳ ಹೆಸರು, ಬ್ರ್ಯಾಂಡ್, ಬ್ಯಾಚ್ ಸಂಖ್ಯೆ, ತಯಾರಿಕೆ ಮತ್ತು ಅವಧಿ ಮುಕ್ತಾಯದ ದಿನಾಂಕ ಸೇರಿದಂತೆ ಅಗತ್ಯ ವಿವರಗಳನ್ನು ಬಿಲ್‌ನಲ್ಲಿ ದಾಖಲಿಸಬೇಕು. ಸ್ಟೆಂಟ್‌ಗಳು, ವೈದ್ಯಕೀಯ ಉಪಕರಣಗಳು ಹಾಗೂ ಇತರ ವೈದ್ಯಕೀಯ ಸಾಮಗ್ರಿಗಳ ಬಿಲ್ಲಿಂಗ್‌ನಲ್ಲೂ ಪಾರದರ್ಶಕತೆ ಕಾಪಾಡುವಂತೆ ಸೂಚಿಸಲಾಗಿದೆ.

ಆಸ್ಪತ್ರೆಗಳು ಔಷಧ ಖರೀದಿ ಇನ್‌ವಾಯ್ಸ್‌ಗಳು ಮತ್ತು ಬಿಲ್ಲಿಂಗ್ ದಾಖಲೆಗಳನ್ನು ಕನಿಷ್ಠ ಮೂರು ವರ್ಷಗಳ ಕಾಲ ಸಂರಕ್ಷಿಸಬೇಕು. ಅಗತ್ಯವಿದ್ದಾಗ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಲಿದ್ದು, ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.

ಹೊಸ ನಿಯಮದಡಿ ಆಸ್ಪತ್ರೆಗಳ ಬಿಲ್ಲಿಂಗ್ ದಾಖಲೆಗಳು ಮತ್ತು ಔಷಧ ಖರೀದಿ ವಿವರಗಳ ಪರಿಶೀಲನೆಗೆ ಅಧಿಕಾರಿಗಳಿಗೆ ಅವಕಾಶ ದೊರೆಯಲಿದೆ. ಇದರಿಂದ ಔಷಧಗಳ ಖರೀದಿ ದರ ಹಾಗೂ ರೋಗಿಗಳಿಗೆ ವಿಧಿಸುವ ಮೊತ್ತದ ನಡುವಿನ ವ್ಯತ್ಯಾಸವನ್ನು ಪರಿಶೀಲಿಸಲು ಸಾಧ್ಯವಾಗಲಿದೆ. ಚಿಕಿತ್ಸೆಗೆ ತಗಲುವ ವೆಚ್ಚದ ಬಗ್ಗೆ ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಹೆಚ್ಚಿನ ಸ್ಪಷ್ಟತೆ ದೊರೆಯಲಿದೆ.

ಆಸ್ಪತ್ರೆಗಳಲ್ಲಿ ದರಪಟ್ಟಿ ಪ್ರದರ್ಶನ ಹಾಗೂ ಬಿಲ್‌ನಲ್ಲಿ ಸಂಪೂರ್ಣ ಮಾಹಿತಿ ನೀಡುವುದರಿಂದ ರೋಗಿಗಳು ತಮ್ಮ ಚಿಕಿತ್ಸಾ ವೆಚ್ಚವನ್ನು ಪರಿಶೀಲಿಸಲು ಅನುಕೂಲವಾಗಲಿದೆ. ನಿಯಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆರೋಗ್ಯ ಮತ್ತು ಔಷಧ ನಿಯಂತ್ರಣ ಇಲಾಖೆಗಳ ಮೇಲ್ವಿಚಾರಣೆ ಮಹತ್ವದ್ದಾಗಿದ್ದು, ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಿತ ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

## ಶಿವಮೊಗ್ಗ ದಸರಾ ಜಂಬೂಸವಾರಿಯಲ್ಲಿ ಅವಘಡ: ಬೆಳ್ಳಿ ಅಂಬಾರಿ ಜಖಂ

● ವಿಕ್ರಮ ವಾಹಿನಿ | ಶಿವಮೊಗ್ಗ

ರಾಜ್ಯದ ಎರಡನೇ ಅತಿದೊಡ್ಡ ದಸರಾ ಎಂದೇ ಪ್ರಸಿದ್ಧವಾದ ಶಿವಮೊಗ್ಗ ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಬುಧವಾರ ಅವಘಡ ಸಂಭವಿಸಿದೆ. ಇದೇ ಮೊದಲ ಬಾರಿಗೆ ದೇವಿಯ ಬೆಳ್ಳಿ ಅಂಬಾರಿ ಹೊತ್ತಿದ್ದ 'ಸೋಮಣ್ಣ' ಆನೆ ಜನಸಂದಣಿಯಿಂದ ವಿಚಲಿತಗೊಂಡು ದಾರಿ ತಪ್ಪಿ ಓಡಿದ ಪರಿಣಾಮ, ಅಂಬಾರಿ ಕೆಳಗೆ ಬಿದ್ದು ಹಾನಿಗೊಳಗಾಗಿದೆ. ಘಟನೆಯಿಂದ ಆತಂಕಗೊಂಡ ಅಧಿಕಾರಿಗಳು ಜಂಬೂಸವಾರಿಯನ್ನು ಅರ್ಧದಲ್ಲೇ ಮೊಟಕುಗೊಳಿಸಿದ್ದಾರೆ.

ಆನೆ ಅಡ್ಡಾದಿಡ್ಡಿಯಾಗಿ ಓಡಿದಾಗ ಮೆರವಣಿಗೆಯಲ್ಲಿದ್ದವರು ಆತಂಕಗೊಂಡರು. ಪರಿಸ್ಥಿತಿಯನ್ನು ನಿಯಂತ್ರಿಸಲು ಅರಣ್ಯ ಇಲಾಖೆ ವೈದ್ಯರು ಸೋಮಣ್ಣ ಆನೆಗೆ ಅರವಳಿಕೆ ಚುಚ್ಚುಮದ್ದು ನೀಡಿದರು. ಇದರಿಂದ ಹೆಚ್ಚಿನ ಅನಾಹುತ ತಪ್ಪಿಸಲು ಕ್ರಮ ಕೈಗೊಳ್ಳಲಾಯಿತು. ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿದೆಯೇ ಎಂಬ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

ಮೈಸೂರಿನ ಮಾದರಿಯಲ್ಲಿ ಶಿವಮೊಗ್ಗದಲ್ಲಿಯೂ ತಾಯಿ ಚಾಮುಂಡೇಶ್ವರಿಯ ಬೆಳ್ಳಿ ಅಂಬಾರಿಯ ಮೆರವಣಿಗೆ ಆಯೋಜಿಸಲಾಗಿತ್ತು. ಸಕ್ರೆಬೈಲು ಆನೆ ಬಿಡಾರದಿಂದ ಸಾಗರ, ಸೋಮಣ್ಣ ಮತ್ತು ಬಹದ್ದೂರ್ ಎಂಬ ಮೂರು ಆನೆಗಳನ್ನು ಕರೆತಂದು ಜಂಬೂಸವಾರಿಗೆ ಸಿದ್ಧಪಡಿಸಲಾಗಿತ್ತು. ನಗರದ ಕೋಟೆ ರಸ್ತೆಯ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಬೆಳಗ್ಗೆಯಿಂದಲೇ ಮಾವುತರು, ಕಾವಾಡಿಗಳು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಆನೆಗಳಿಗೆ ಬಣ್ಣ ಹಚ್ಚಿ ಸಿಂಗಾರಗೊಳಿಸಿದ್ದರು.

ಮಧ್ಯಾಹ್ನ 2.30ಕ್ಕೆ ಶಿವಪ್ಪ ನಾಯಕ ಕೋಟೆಯ ಮುಂಭಾಗದಲ್ಲಿ ಜಂಬೂಸವಾರಿ ಆರಂಭವಾಗಿತ್ತು. ಅದಕ್ಕೂ ಮೊದಲು ನಂದಿಧ್ವಜ ಪೂಜೆ ನೆರವೇರಿಸಲಾಯಿತು. ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಅವರು ಮೆರವಣಿಗೆಗೆ ಚಾಲನೆ ನೀಡಿದ್ದರು.

ಪ್ರತಿ ವರ್ಷ ಚಾಮುಂಡೇಶ್ವರಿಯ ಬೆಳ್ಳಿ ಅಂಬಾರಿಯನ್ನು ಸಾಗರ ಆನೆ ಹೊರುತ್ತಿತ್ತು. ಆದರೆ, ಈ ಬಾರಿ ಸೋಮಣ್ಣನಿಗೆ ಆ ಜವಾಬ್ದಾರಿ ನೀಡಲಾಗಿತ್ತು. ಸಾಗರ, ಸೋಮಣ್ಣ ಮತ್ತು ಬಹದ್ದೂರ್ ಆನೆಗಳು ತಾಲೀಮು ನಡೆಸಿದ್ದವು. ಅರಣ್ಯಾಧಿಕಾರಿಗಳು ಮಂಗಳವಾರ ಸಂಜೆ ಸೋಮಣ್ಣನನ್ನು ಅಂಬಾರಿ ಹೊರುವ ಆನೆಯಾಗಿ ಆಯ್ಕೆ ಮಾಡಿದ್ದರು. ಇದೇ ಮೊದಲ ಬಾರಿಗೆ ಅಂಬಾರಿ ಹೊತ್ತ ಸೋಮಣ್ಣ ಆನೆ ಮೆರವಣಿಗೆಯ ಮಧ್ಯೆ ವಿಚಲಿತಗೊಂಡಿದ್ದರಿಂದ ದಸರಾ ಸಂಭ್ರಮಕ್ಕೆ ಅಡ್ಡಿಯಾಯಿತು.

## ವಿಜಯವಾಡದಲ್ಲಿ ರೂ 5.84 ಕೋಟಿ ಮೌಲ್ಯದ ಚಿನ್ನ, ವಿದೇಶಿ ಕರೆನ್ಸಿ ಜಪ್ತಿ; ಐವರ ಬಂಧನ

● ವಿಕ್ರಮ ವಾಹಿನಿ | ವಿಜಯವಾಡ

ಬಾಂಗ್ಲಾದೇಶದಿಂದ ಕೋಲ್ಕತ್ತಾ ಮಾರ್ಗವಾಗಿ ಹೈದರಾಬಾದ್‌ಗೆ ಚಿನ್ನ ಮತ್ತು ವಿದೇಶಿ ಕರೆನ್ಸಿ ಕಳ್ಳಸಾಗಣೆ ಮಾಡುತ್ತಿದ್ದ ಜಾಲವನ್ನು ಕಂದಾಯ ಗುಪ್ತಚರ ನಿರ್ದೇಶನಾಲಯದ (ಡಿಆರ್‌ಐ) ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ಕಾರ್ಯಾಚರಣೆಯಲ್ಲಿ ಒಟ್ಟು ರೂ 5.84 ಕೋಟಿ ಮೌಲ್ಯದ ಚಿನ್ನ ಮತ್ತು ವಿದೇಶಿ ಕರೆನ್ಸಿಯನ್ನು ಜಪ್ತಿ ಮಾಡಲಾಗಿದ್ದು, ಕಳ್ಳಸಾಗಣೆ ಜಾಲಕ್ಕೆ ಸಂಬಂಧಿಸಿದ ಐವರನ್ನು ಬಂಧಿಸಲಾಗಿದೆ.

ಖಚಿತ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು, ವಿಜಯವಾಡದ ಹೊರವಲಯದಲ್ಲಿ ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ ಸ್ಕಾರ್ಪಿಯೋ ವಾಹನವನ್ನು ತಡೆದು ಪರಿಶೀಲಿಸಿದರು. ಈ ವೇಳೆ, ವಾಹನದೊಳಗೆ ಯಾರ ಗಮನಕ್ಕೂ ಬಾರದಂತೆ ನಿರ್ಮಿಸಲಾಗಿದ್ದ ರಹಸ್ಯ ಸ್ಥಳದಲ್ಲಿ ಅಡಗಿಸಿಟ್ಟಿದ್ದ ವಿದೇಶಿ ಕರೆನ್ಸಿಯನ್ನು ಪತ್ತೆಹಚ್ಚಿದರು. ಪರಿಶೀಲನೆಯ ಸಂದರ್ಭದಲ್ಲಿ 60,000 ಅಮೆರಿಕನ್ ಡಾಲರ್ ಹಾಗೂ 21,500 ಯುರೋಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ಕಳ್ಳಸಾಗಣೆ ಜಾಲಕ್ಕೆ ಸಂಬಂಧಿಸಿದ ಮತ್ತೊಂದು ಕಾರ್ಯಾಚರಣೆಯಲ್ಲಿ, ಹೈದರಾಬಾದ್‌ಗೆ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಮೂವರನ್ನು ಡಿಆರ್‌ಐ ಅಧಿಕಾರಿಗಳು ತಡೆದು ತಪಾಸಣೆ ನಡೆಸಿದರು. ಆರೋಪಿಗಳು ವಿಶೇಷವಾಗಿ ಸಿದ್ಧಪಡಿಸಿದ ಚೀಲಗಳನ್ನು ಸೊಂಟಕ್ಕೆ ಕಟ್ಟಿಕೊಂಡು ಚಿನ್ನ ಸಾಗಿಸುತ್ತಿದ್ದರು ಎಂದು ತಿಳಿದುಬಂದಿದೆ.

ತಪಾಸಣೆ ನಡೆಸಿದಾಗ ಅವರ ಬಳಿ ಒಟ್ಟು 3.147 ಕೆ.ಜಿ. ತೂಕದ ಚಿನ್ನದ ಬಿಸ್ಕತ್ತುಗಳು ಪತ್ತೆಯಾಗಿವೆ. ವಿದೇಶಿ ಕರೆನ್ಸಿ ಸಾಗಿಸುತ್ತಿದ್ದವರ ವಿರುದ್ಧದ ಕಾರ್ಯಾಚರಣೆಯ ಜೊತೆಗೆ ಈ ತಂಡವನ್ನೂ ಬಂಧಿಸುವ ಮೂಲಕ ಅಧಿಕಾರಿಗಳು ಕಳ್ಳಸಾಗಣೆ ಜಾಲದ ಪ್ರಮುಖ ಸುಳಿವುಗಳನ್ನು ಸಂಗ್ರಹಿಸಿದ್ದಾರೆ.

ಬಾಂಗ್ಲಾದೇಶದಿಂದ ಆರಂಭವಾಗಿ ಕೋಲ್ಕತ್ತಾ ಮೂಲಕ ಹೈದರಾಬಾದ್‌ಗೆ ತಲುಪುತ್ತಿದ್ದ ಕಳ್ಳಸಾಗಣೆ ಮಾರ್ಗದ ಹಿಂದಿರುವ ಪ್ರಮುಖ ಆರೋಪಿಗಳನ್ನು ಗುರುತಿಸುವುದು ತನಿಖೆಯ ಮುಖ್ಯ ಉದ್ದೇಶವಾಗಿದೆ. ಹೈದರಾಬಾದ್‌ನಲ್ಲಿ ಈ ಜಾಲಕ್ಕೆ ನೆರವು ನೀಡುತ್ತಿದ್ದವರು ಯಾರು ಎಂಬುದನ್ನೂ ಪತ್ತೆಹಚ್ಚಲು ಅಧಿಕಾರಿಗಳು ಮುಂದಾಗಿದ್ದಾರೆ. ಚಿನ್ನ ಮತ್ತು ವಿದೇಶಿ ಕರೆನ್ಸಿಯ ಅಕ್ರಮ ಸಾಗಣೆಯ ಹಿಂದೆ ಸಂಘಟಿತ ಜಾಲ ಕಾರ್ಯನಿರ್ವಹಿಸುತ್ತಿದೆಯೇ ಎಂಬುದನ್ನು ತಿಳಿಯಲು ತನಿಖೆ ಮುಂದುವರಿದಿದೆ.

# ನೆರೆರಾಜ್ಯಗಳ ಸಿಎಂಗಳ ಸಾಥ್‌ನಲ್ಲಿ ಜಂಬೂಸವಾರಿ; ಚಾಮುಂಡೇಶ್ವರಿಗೆ ಸಿಎಂ ಪುಷ್ಪಾರ್ಚನೆ

● ವಿಕ್ರಮ ವಾಹಿನಿ | ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ ಜಂಬೂಸವಾರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬುಧವಾರ ಸಂಜೆ ಅಂಬಾವಿಲಾಸ ಅರಮನೆಯ ಆವರಣದಲ್ಲಿ ನಾಡಿನ ಅಧಿದೇವತೆ ತಾಯಿ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಕೇರಳ ಮುಖ್ಯಮಂತ್ರಿ ವಿ.ಡಿ. ಸತೀಶನ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಹಾಗೂ ಮೈಸೂರು ರಾಜವಂಶಸ್ಥ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಉಪಸ್ಥಿತಿ ಈ ಬಾರಿಯ ದಸರಾಕ್ಕೆ ವಿಶೇಷ ಮೆರುಗು ನೀಡಿತು.

ಬೆಳಗ್ಗೆ ಸುತ್ತೂರು ಮಠಕ್ಕೆ ಭೇಟಿ ನೀಡಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಗಳ ಆಶೀರ್ವಾದ ಪಡೆದ ಮುಖ್ಯಮಂತ್ರಿ, ಹೋಮ-ಹವನಗಳಲ್ಲಿ ಪಾಲ್ಗೊಂಡರು. ಬಳಿಕ ಬನ್ನಿಮರ ಹಾಗೂ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು. ಮಧ್ಯಾಹ್ನ ಸಾಂಪ್ರದಾಯಿಕ ಮೈಸೂರು ಪೇಟ ಧರಿಸಿ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ನಂದಿಧ್ವಜಕ್ಕೆ ಪೂಜೆ ಸಲ್ಲಿಸಿ, ದಸರಾ ಸ್ತಬ್ಧಚಿತ್ರ ಹಾಗೂ ಕಲಾತಂಡಗಳ ಮೆರವಣಿಗೆಗೆ ಚಾಲನೆ ನೀಡಿದರು.

ಆರು ಬಾರಿ ಚಿನ್ನದ ಅಂಬಾರಿ ಹೊತ್ತ ಅಭಿಮನ್ಯು ಸೇರಿದಂತೆ ದಸರಾ ಆನೆಗಳಿಗೆ ಪುಷ್ಪಾರ್ಚನೆ ಸಲ್ಲಿಸಿದ ಸಿಎಂ, ಪತ್ನಿಯೊಂದಿಗೆ ಕಬ್ಬಿನ ಜಲ್ಲೆ ನೀಡಿ ಗೌರವಿಸಿದರು. ಮೆರವಣಿಗೆಯಲ್ಲಿ ವಿವಿಧ ರಾಜ್ಯಗಳ ಕಲಾಪ್ರಕಾರಗಳು, ಜನಪದ ಕಲಾತಂಡಗಳು, ಕನ್ನಡ ಚಿತ್ರರಂಗದ ಕಲಾವಿದರು ಹಾಗೂ ಭೂಸೇನೆ, ವಾಯುಸೇನೆ ಮತ್ತು ನೌಕಾಪಡೆಯ ಬ್ಯಾಂಡ್‌ಗಳು ಭಾಗವಹಿಸಿ ಸಂಭ್ರಮ ಹೆಚ್ಚಿಸಿದವು.

ಸಚಿವರು ಹಾಗೂ ಶಾಸಕ ತನ್ವೀರ್ ಸೇಠ್ ಅವರೊಂದಿಗೆ ತೆರೆದ ವಾಹನದಲ್ಲಿ ಆಗಮಿಸಿದ ಮುಖ್ಯಮಂತ್ರಿ, ಸಾರ್ವಜನಿಕರಿಗೆ ಕೈಮುಗಿದು ವಂದಿಸಿದರು. ವಿದೇಶಿ ರಾಯಭಾರಿಗಳೊಂದಿಗೆ ಕುಶಲೋಪರಿ ವಿನಿಮಯ ಮಾಡಿಕೊಂಡು, ಕಲಾತಂಡಗಳ ಪ್ರದರ್ಶನಗಳನ್ನು ಮೆಚ್ಚಿ ಕಲಾವಿದರನ್ನು ಹುರಿದುಂಬಿಸಿದರು. ಜಂಬೂಸವಾರಿಯನ್ನು ಕಣ್ತುಂಬಿಕೊಳ್ಳಲು ಅರಮನೆಯ ಸುತ್ತಮುತ್ತ ಸಾವಿರಾರು ಜನರು ನೆರೆದಿದ್ದರು.

ರಾತ್ರಿ ಬನ್ನಿಮಂಟಪದಲ್ಲಿ ರಾಜ್ಯಪಾಲೆ ಡಾ. ಸುಧಾ ಯಾದವ್, ಕೇರಳ ಮತ್ತು ತೆಲಂಗಾಣದ ಮುಖ್ಯಮಂತ್ರಿಗಳೊಂದಿಗೆ ಡಿ.ಕೆ. ಶಿವಕುಮಾರ್ ಅವರು



ಸಿಎಂ ಡಿ ಕೆ ಶಿವಕುಮಾರ್ ಅವರು ಪತ್ನಿ ಉಷಾ ಹಾಗೂ ಕೇರಳಮ್ ಸಿಎಂ ವಿ ಡಿ ಸತೀಶನ್ ಅವರ ಜತೆ ಮೈಸೂರಿನ ಬನ್ನಿ ಮಂಟಪದ ಬಳಿ ಬನ್ನಿ ಮರಕ್ಕೆ ಬುಧವಾರ ಸಂಜೆ ಪೂಜೆ ಸಲ್ಲಿಸಿದರು.

ಪಂಜಿನ ಕವಾಯತು ವೀಕ್ಷಿಸಿದರು.

ಡ್ರೋನ್‌ಗಳ ಮೂಲಕ ಆಕಾಶದಲ್ಲಿ ಮೂಡಿಬಂದ ಮುಖ್ಯಮಂತ್ರಿಗಳ ಬೃಹತ್ ಚಿತ್ತಾರ ಜನರ ಗಮನ ಸೆಳೆಯಿತು. ವಿವಿಧ ರಾಜ್ಯಗಳ ಪ್ರತಿನಿಧಿಗಳು, ರಾಜವಂಶಸ್ಥರು ಹಾಗೂ ಕಲಾತಂಡಗಳ ಪಾಲ್ಗೊಳ್ಳುವಿಕೆಯೊಂದಿಗೆ ದಸರಾ ಸಂಭ್ರಮ ಸಂಪನ್ನವಾಯಿತು.

ಜಂಬೂಸವಾರಿಯ ಹಿನ್ನೆಲೆಯಲ್ಲಿ ಮೈಸೂರು ನಗರದಲ್ಲಿ ಹಬ್ಬದ ವಾತಾವರಣ ಮನೆಮಾಡಿತ್ತು. ಅರಮನೆಯ ಸುತ್ತಮುತ್ತಲಿನ ರಸ್ತೆಗಳು




ಜನರಿಂದ ತುಂಬಿದ್ದವು. ಕುಟುಂಬ ಸಮೇತರಾಗಿ ಆಗಮಿಸಿದ್ದ ಪ್ರವಾಸಿಗರು, ಸ್ಥಳೀಯರು ಹಾಗೂ ವಿದೇಶಿ ಪ್ರವಾಸಿಗರು ಮೆರವಣಿಗೆಯ ವೈಭವವನ್ನು ಕಣ್ತುಂಬಿಕೊಂಡರು.

ಜನಸಂದಣಿಯ ನಡುವೆಯೂ ದಸರಾ ಸಂಭ್ರಮಕ್ಕೆ ಸಾಕ್ಷಿಯಾಗಲು ಜನರು ಉತ್ಸಾಹದಿಂದ ಪಾಲ್ಗೊಂಡಿದ್ದರು. ದಸರಾ ಕಾರ್ಯಕ್ರಮಗಳಲ್ಲಿ ಸಂಪ್ರದಾಯ ಮತ್ತು ಆಧುನಿಕ ತಂತ್ರಜ್ಞಾನದ ಸಮ್ಮಿಲನ ಗಮನ ಸೆಳೆಯಿತು. ಅರಮನೆಯ ಧಾರ್ಮಿಕ ವಿಧಿವಿಧಾನಗಳಿಂದ ಆರಂಭಗೊಂಡ ಸಂಭ್ರಮ ಬನ್ನಿಮಂಟಪದ ಪಂಜಿನ ಕವಾಯತಿನವರೆಗೆ ಮುಂದುವರಿಯಿತು.

ಡ್ರೋನ್‌ಗಳ ಮೂಲಕ ಆಕಾಶದಲ್ಲಿ ಮೂಡಿಬಂದ ಬೃಹತ್ ಚಿತ್ತಾರಗಳು ಕಾರ್ಯಕ್ರಮಕ್ಕೆ ಹೊಸ ಆಕರ್ಷಣೆ ನೀಡಿದವು. ನಾಡಿನ ಪರಂಪರೆ, ಕಲೆ ಮತ್ತು ಸಾಂಸ್ಕೃತಿಕ ವೈಭವವನ್ನು ಸಾರಿದ ಮೈಸೂರು ದಸರಾ ಸಂಭ್ರಮದಿಂದ ಸಂಪನ್ನವಾಯಿತು.

# ಗೊರೂರು ಪಂಕಜರಿಗೆ ಕೈಯ್ಯಾರ ಕಿಞ್ಞಣ್ಣರೈ ರಾಷ್ಟ್ರೀಯ ಸದ್ಭಾವನ ಪ್ರಶಸ್ತಿ ಪ್ರದಾನ

● ವಿಕ್ರಮ ವಾಹಿನಿ | ಬೆಂಗಳೂರು

ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಉಳಿವು ಹಾಗೂ ಬೆಳವಣಿಗೆಗೆ ಸಂಘಟಿತ ಪ್ರಯತ್ನಗಳು ಅಗತ್ಯವಾಗಿವೆ ಎಂದು ಸಮಾಜಿಕ ಕಾರ್ಯಕರ್ತ ಶ್ರೀನಿವಾಸ ಬಹದ್ದೂರ್ ಹೇಳಿದರು.

ಕಾಸರಗೋಡು ದಸರಾ ಅಂಗವಾಗಿ ಗಡಿನಾಡು ಕಾಸರಗೋಡಿನ ಪಾಂಗೋಡಿನಲ್ಲಿ ಕನ್ನಡ ಭವನದ ವತಿಯಿಂದ ನಡೆದ ಕನ್ನಡ ಸಾಂಸ್ಕೃತಿಕೋತ್ಸವ ಮತ್ತು ಕವಿ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗಡಿನಾಡಿನಲ್ಲಿ ಕನ್ನಡದ ಅಸ್ಮಿತೆಯನ್ನು ಉಳಿಸಿ ಬೆಳೆಸುವಲ್ಲಿ ಕನ್ನಡಪರ ಸಂಘ-ಸಂಸ್ಥೆಗಳು ಹಾಗೂ ಸಾಹಿತ್ಯಿಕ ವೇದಿಕೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮ ಉದ್ಘಾಟಿಸಿದ ಡಾ. ಎಂ. ಜಿ. ಆರ್. ಅರಸು ಅವರು, ಕವಿ ಸಮ್ಮೇಳನವು ಕವಿಗಳ ಸೃಜನಶೀಲ ಅಭಿವ್ಯಕ್ತಿಗೆ ಮಾತ್ರ ಸೀಮಿತವಾಗದೆ, ಕನ್ನಡದ ಮನಸ್ಸುಗಳನ್ನು ಬೆಸೆಯುವ ಹಾಗೂ ಭಾಷೆಯ ಮೇಲಿನ ಪ್ರೀತಿಯನ್ನು ಗಟ್ಟಿಗೊಳಿಸುವ ಸಾಂಸ್ಕೃತಿಕ ವೇದಿಕೆಯಾಗಬೇಕು ಎಂಬ ಆಶಯವನ್ನು



ಅವರು ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಬೆಂಗಳೂರಿನ ಖ್ಯಾತ ಕವಯತ್ರಿ ಗೊರೂರು ಪಂಕಜ ಅವರಿಗೆ ನಾಡೋಜ ಡಾ. ಕಯ್ಯಾರ ಕಿಞ್ಞಣ್ಣ ರೈ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಗೊರೂರು ಪಂಕಜ, ಗಡಿನಾಡು ಪ್ರದೇಶಗಳಲ್ಲಿ ಹೆಚ್ಚು ಹೆಚ್ಚು ಕನ್ನಡದ ಕಾರ್ಯಕ್ರಮ ನಡೆಸುವ ಮೂಲಕ ಕನ್ನಡದ ಅಸ್ಮಿತೆಯನ್ನು ಸ್ಥಾಪಿಸುವ ಜೊತೆಗೆ ಸಂಸ್ಕೃತಿಯನ್ನು ಉಳಿಸುವುದು, ಕನ್ನಡಿಗರ ಆತ್ಮ ಗೌರವವನ್ನು ಎತ್ತಿ ಹಿಡಿಯುವ ನಿಟ್ಟಿನಲ್ಲಿ ಸರ್ಕಾರ ಯೋಜನೆ ರೂಪಿಸಬೇಕು ಎಂದು ಅಭಿಪ್ರಾಯ ಪಟ್ಟರು.

ಗಡಿನಾಡಿನ ಕನ್ನಡಿಗರು ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ವಿಚಾರದಲ್ಲಿ ಜಾಗೃತರಾಗಿರಬೇಕು. ಕಾಸರಗೋಡಿನಲ್ಲಿ ಕನ್ನಡದ ಕಾಯಕವನ್ನು ನಿರಂತರವಾಗಿ ನಡೆಸುತ್ತಿರುವ ಕನ್ನಡ ಭವನದ ರುವಾರಿ ಡಾ. ವಾಮನರಾವ್ ಬೇಕಲ್ ಅವರು ತಮ್ಮ ಮನೆಯನ್ನೇ ಕನ್ನಡಮಯವಾಗಿಸಿದ್ದಾರೆ. ಯಾರೇ ಕನ್ನಡಿಗರು ಅಲ್ಲಿ ಹೋಗಿ ಉಳಿಯುವ ಅವಕಾಶ ಕಲ್ಪಿಸಿರುವುದು ಪ್ರಶಂಸನೀಯ ಎಂದು ವಾಮನರಾವ್ ಅವರ ಸೇವೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಡಾ. ವಾಮನರಾವ್ ಬೇಕಲ್, ಜೆ. ಪಿ. ಅರಸ್, ಕವಿ ಜಯಪ್ಪ ಹೊನ್ನಾಳಿ, ಸೀತಾಲಕ್ಷ್ಮೀ ವರ್ಮಾ, ಸಂಧ್ಯಾರಾಣಿ ಟೀಚರ್, ವಸಂತ ಕೆರೆಮನೆ ಉಪಸ್ಥಿತರಿದ್ದರು.

# 'ರೌಡಿ ಪಡೆ ಮಟ್ಟಹಾಕಲು ವಿಶೇಷ ಪಡೆ'

● ವಿಕ್ರಮ ವಾಹಿನಿ | ಬೆಂಗಳೂರು



**"ಪೊಲೀಸರು ಪ್ರಭಾವಿಗಳು ಮತ್ತು ಜನಸಾಮಾನ್ಯರು ಎಂಬ ಭೇದವಿಲ್ಲದೆ ಎಲ್ಲರನ್ನೂ ಸಮಾನವಾಗಿ ಕಾಣಬೇಕು. ಸಂವಿಧಾನ ಮತ್ತು ಕಾನೂನಿನ ಚೌಕಟ್ಟಿನಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು ಪೊಲೀಸರ ಮೊದಲ ಆದ್ಯತೆಯಾಗಬೇಕು. ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ 7,900ಕ್ಕೂ ಹೆಚ್ಚು ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಪೊಲೀಸರ ವಸತಿ, ಆಧುನಿಕ ವಾಹನಗಳು ಮತ್ತು ತಂತ್ರಜ್ಞಾನ ವ್ಯವಸ್ಥೆಗಳಿಗೆ ಸರ್ಕಾರ ಅಗತ್ಯ ಅನುದಾನ ಒದಗಿಸಲಿದೆ. ಬೆಂಗಳೂರಿನಲ್ಲಿ ರೌಡಿಗಳ ಹಾವಳ ನಿಯಂತ್ರಿಸಲು ವಿಶೇಷ ತಂಡ ರಚಿಸಲು ಸೂಚಿಸಲಾಗಿದೆ. ಸಾರ್ವಜನಿಕರಿಗೆ ನೆಮ್ಮದಿಯ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಗೆ ಸರ್ಕಾರ ಸಂಪೂರ್ಣ ಸಹಕಾರ ನೀಡಲಿದೆ." -ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ**

ಪೊಲೀಸರು ಪ್ರಭಾವಿಗಳು ಜನಸಾಮಾನ್ಯರು ಎಲ್ಲರನ್ನೂ ಒಂದೇ ರೀತಿ ಕಾಣಬೇಕು. ಸಂವಿಧಾನ ಹಾಗೂ ಕಾನೂನುಗಳ ಅನ್ವಯ ಕಾನೂನು ಸುವ್ಯವಸ್ಥೆ ಪೊಲೀಸರ ಆದ್ಯತೆಯಾಗಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ಮೈಸೂರು ರಸ್ತೆಯ ಸಶಸ್ತ್ರ ಮೀಸಲು ಪಡೆಯ ಮುಖ್ಯ ಕಚೇರಿಯ ಮೈದಾನದಲ್ಲಿ ನಡೆದ ಪೊಲೀಸ್ ಸಂಸ್ಮರಣಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ 7,900 ಕ್ಕೂ ಅಧಿಕ ಹುದ್ದೆಗಳನ್ನು ಭರ್ತಿ ಮಾಡಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪೊಲೀಸರ ವಸತಿಗೂ ಅನೇಕ ಕಾರ್ಯಕ್ರಮ ರೂಪಿಸಿ ಹಣ ಒದಗಿಸಲು ಬದ್ಧರಾಗಿದ್ದೇವೆ. ಈಗಾಗಲೇ ಪೊಲೀಸ್ ವಸತಿ ಯೋಜನೆಯಡಿ ಸಾಕಷ್ಟು ಮನೆಗಳನ್ನು ನಿರ್ಮಿಸಲಾಗಿದೆ. ಅದೇ ರೀತಿ ಹೊಸ ವಾಹನಗಳ ಖರೀದಿ, ತಂತ್ರಜ್ಞಾನದ ವ್ಯವಸ್ಥೆಗೂ ಬಜೆಟ್ ನಲ್ಲಿ ಅನುದಾನ ಮೀಸಲಿಡಲಾಗಿದೆ ಎಂದು ಹೇಳಿದರು.

ಬೆಂಗಳೂರಲ್ಲಿ ರೌಡಿ ಪಡೆ ಮಟ್ಟ ಹಾಕಲು ವಿಶೇಷ ತಂಡ ರಚನೆಗೆ ಈಗಾಗಲೇ ಸೂಚನೆ ಕೊಡಲಾಗಿದೆ. ಶ್ರಿಸಾಮಾನ್ಯರಿಗೆ ನೆಮದಿಯ ವಾತಾವರಣ ನಿರ್ಮಾಣ ಮಾಡಬೇಕು. ಈ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ರೀತಿಯ ನೆರವು ಹಾಗೂ ಸಹಕಾರ ನೀಡಲಿದೆ ಎಂದು ಹೇಳಿದರು.

ಬೆಂಗಳೂರಿನ ಪೊಲೀಸ್ ಆಯುಕ್ತಾಲಯವನ್ನು ಐದು ಆಯುಕ್ತಾಲಯವನ್ನಾಗಿ ವಿಭಜಿಸುತ್ತಿರುವುದಕ್ಕೆ ಪೊಲೀಸ್ ಅಧಿಕಾರಿಗಳಿಗೆ ಸಮಧಾನ ಇಲ್ಲ ಎಂಬ ವಿಷಯ ತಮಗೆ ತಿಳಿದಿದೆ. ಆದರೆ ನಗರದ ಜನ ಸಂಖ್ಯೆ ಹೆಚ್ಚಾಗಿರುವದರಿಂದ ಆಡಳಿತಾತಕ ಹಾಗೂ ಕಾರ್ಯನಿರ್ವಹಣೆಯ ಕಾರಣಕ್ಕೆ ಈ ನಿರ್ಧಾರ ಅನಿವಾರ್ಯವಾಗಿತ್ತು. ಸರ್ಕಾರ ಈಗಾಗಲೇ ನಿರ್ಧಾರ ತೆಗೆದುಕೊಂಡಿದೆ, ಅದನ್ನು ಪರಿಣಾಮಕಾರಿಯಾಗಿ ಜಾರಿ ಮಾಡಬೇಕು ಎಂದು ಅವರು ಸೂಚಿಸಿದರು.

ಹುತಾತ ಪೊಲೀಸರಿಗೆ ಗೌರವ ಸಲ್ಲಿಸುವುದಷ್ಟೆ ತಮ ಉದ್ದೇಶವಲ್ಲ, ಬದುಕನ್ನೆ ಸಮಾಜದ ರಕ್ಷಣೆಗಾಗಿ ಮುಡುಪಾಗಿಟ್ಟ ಮಹಾನ್ ಜೀವಗಳಿಗೆ ಕೃತಜ್ಞತೆ ಸಲ್ಲಿಸಲು ಬಂದಿದ್ದೇನೆ ಎಂದು ಹೇಳಿದರು.

1959ರಲ್ಲಿ ಚೀನಾದ ದಾಳಿಯಲ್ಲಿ ಹುತಾತರಾದ ಹತ್ತು ಮಂದಿ ಪೊಲೀಸರ ಬಲಿದಾನದ ಸರಣಾರ್ಥ ಪೊಲೀಸ್ ಸಂಸರಣಾ ದಿನವನ್ನು ಆಚರಿಸಲಾಗುತ್ತಿದೆ, ಆ ಪರಂಪರಯನ್ನು ನಾವು ಇಂದಿಗೂ ಮುಂದುವರೆಸಿದ್ದೇವೆ ಎಂದರು.ಹುತಾತರನ್ನು ಸರಿಸುವುದು ಮತ್ತು ಸಂತಾಪ ಸೂಚಿಸುವುದಷ್ಟೆ ನಮ ಉದ್ದೇಶವಾಗಬಾರದು. ಅವರು ತೋರಿದ ಕರ್ತವ್ಯನಿಷ್ಠೆ, ತ್ಯಾಗ ಮತ್ತು ಜನಸೇವೆಯ ಮೌಲ್ಯಗಳನ್ನು ಮುಂದುವರಿಸಿಕೊಂಡು ಹೋಗುವುದು ನಮ ಆದ್ಯತೆಯಾಗಬೇಕು ಎಂದು ತಿಳಿಸಿದರು.

ನಾಡಹಬ್ಬದ ಸಂದರ್ಭದಲ್ಲಿ ನಮ್ಮ ಪರಂಪರೆ ಮತ್ತು ಸಂಸ್ಕೃತಿಯನ್ನು ಕಾಪಾಡಿಕೊಳ್ಳುತ್ತಿದ್ದೇವೆ. ಸಂಸ್ಕೃತಿ ನಮ ದೇಶದ ಆಸ್ತಿ. ನಮ್ಮೆಲ್ಲರ ರಕ್ಷಣೆಗಾಗಿ ತಮ ಜೀವನವನ್ನೆ ಸಮರ್ಪಿಸಿದ ಧೀರ ಪೊಲೀಸರಿಗೆ ಈ ಸಂದರ್ಭದಲ್ಲಿ ಗೌರವ ಸಲ್ಲಿಸುತ್ತಿದ್ದೇವೆ. ಪೊಲೀಸರ ಕರ್ತವ್ಯನಿಷ್ಠೆಯ ಜೊತೆಗೆ ಅವರ ಕುಟುಂಬದ ಸದಸ್ಯರು ಮಾಡಿರುವ ತ್ಯಾಗವನ್ನೂ ನಾವು ಸರಿಸಬೇಕು ಎಂದು ಹೇಳಿದರು.

ಇಂದು ಹಚ್ಚಿರುವ ದೀಪಗಳು ಕೇವಲ ಶ್ರದ್ಧಾಂಜಲಿಯ ಸಂಕೇತಗಳಲ್ಲ. ಜನರ ರಕ್ಷಣೆಗಾಗಿ ಸದಾ ಸಿದ್ಧರಾಗಿರುವ ಪೊಲೀಸರ ಪರವಾಗಿ ನಾವು ಕೈಗೊಳ್ಳುವ ಸಂಕಲ್ಪದ ಸಂಕೇತಗಳಾಗಿವೆ. ಕಳೆದ ವರ್ಷ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಹುತಾತರಾದ ಆರು ಮಂದಿ ಪೊಲೀಸರನ್ನೂ ಇದೇ ಸಂದರ್ಭದಲ್ಲಿ ಸರಿಸಿಕೊಳ್ಳುತ್ತಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು.

ನಾನು ಆಗಾಗ ಹೇಳ್ತೆನೆ, ನೀವೆಲ್ಲಾ ಶ್ರಿಕೃಷ್ಣ ಪರಮಾತನ ವಂಶಕ್ಕೆ ಸೇರದವರು. ಸಮಾಜದಲ್ಲಿ ಸುವ್ಯವಸ್ಥೆ ಹದಗೆಟ್ಟಾಗ ನಿಮ ರಕ್ಷಣೆ ಎಲ್ಲರನ್ನೂ ಕಾಪಾಡುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ.ಸಲೀಂ, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕಟಾರಿಯಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## 137 ಕ್ಯಾನ್ಸರ್ ಔಷಧಿಗಳ ಬೆಲೆ ಇಳಿಕೆ: ನ. 9ರಿಂದ ಹೊಸ ದರ ಜಾರಿ

● ವಿಕ್ರಮ ವಾಹಿನಿ | ನವದೆಹಲಿ

ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸಾ ವೆಚ್ಚದ ಹೊರೆ ತಗ್ಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ಕ್ಯಾನ್ಸರ್ ಚಿಕಿತ್ಸೆಗೆ ಬಳಸುವ 137 ಔಷಧಿಗಳ ಮೇಲಿನ ವ್ಯಾಪಾರ ಲಾಭಾಂಶವನ್ನು ನಿಯಂತ್ರಿಸಲು ನಿರ್ಧರಿಸಲಾಗಿದ್ದು, ಇದರಿಂದ ಕೆಲವು ಔಷಧಿಗಳ ಬೆಲೆಯಲ್ಲಿ ಗಣನೀಯ ಇಳಿಕೆಯಾಗುವ ನಿರೀಕ್ಷೆಯಿದೆ. ಪರಿಷ್ಕೃತ ದರಗಳು 2026ರ ನವೆಂಬರ್ 9ರಿಂದ ಜಾರಿಗೆ ಬರಲಿವೆ.

ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯದ ಪ್ರಕಾರ, ಈ 137 ಔಷಧಿಗಳನ್ನು ವ್ಯಾಪಾರ ಲಾಭಾಂಶ ನಿಯಂತ್ರಣ ವ್ಯವಸ್ಥೆಯ ವ್ಯಾಪ್ತಿಗೆ ತರಲಾಗಿದೆ. ಇದರಡಿ ಔಷಧಿಗಳ ಗರಿಷ್ಠ ಚಿಲ್ಲರೆ ಮಾರಾಟ ಬೆಲೆಯಲ್ಲಿ ವ್ಯಾಪಾರ ಲಾಭಾಂಶವನ್ನು ಶೇ. 30ಕ್ಕೆ ಸೀಮಿತಗೊಳಿಸಲಾಗುತ್ತದೆ. ಇದರಿಂದ ಕೆಲವು ಔಷಧಿಗಳ ಬೆಲೆ ಶೇ. 70ರವರೆಗೆ ಕಡಿಮೆಯಾಗುವ ಸಾಧ್ಯತೆಯಿದೆ. ಆದರೆ, ಎಲ್ಲ ಔಷಧಿಗಳ ಬೆಲೆಯೂ ಇಷ್ಟೇ ಪ್ರಮಾಣದಲ್ಲಿ ಇಳಿಕೆಯಾಗುವುದಿಲ್ಲ. ಪ್ರಸ್ತುತ ಬೆಲೆ ಮತ್ತು ಲಾಭಾಂಶವನ್ನು ಆಧರಿಸಿ ಇಳಿಕೆಯ ಪ್ರಮಾಣ ನಿರ್ಧಾರವಾಗಲಿದೆ.

**ಪ್ರಮುಖ ಔಷಧಿಗಳೂ ಪಟ್ಟಿಯಲ್ಲಿ:** ಈ ಪಟ್ಟಿಯಲ್ಲಿ 20ಕ್ಕೂ ಹೆಚ್ಚು ಬಗೆಯ ಕ್ಯಾನ್ಸರ್‌ಗಳ ಚಿಕಿತ್ಸೆಗೆ ಬಳಸುವ ಔಷಧಿಗಳು ಸೇರಿವೆ. ಸ್ತನ ಮತ್ತು ಪ್ರಾಸ್ಟೇಟ್ ಕ್ಯಾನ್ಸರ್ ಚಿಕಿತ್ಸೆಯಲ್ಲಿ ಬಳಸುವ ಡೆನೊಸುಮಾಬ್, ಬಿಳಿ ರಕ್ತಕಣಗಳ ಕೊರತೆಯನ್ನು ತಡೆಯಲು ಬಳಸುವ ಪೆಗ್‌ಫಿಲ್‌ಗ್ರಾಸ್ಟಿಮ್ ಹಾಗೂ ಕರುಳು, ಅಂಡಾಶಯ ಮತ್ತು ಗರ್ಭಕಂಠದ ಕ್ಯಾನ್ಸರ್ ಚಿಕಿತ್ಸೆಯಲ್ಲಿ ಬಳಸುವ ಬೆವಾಸಿಜುಮಾಬ್ ಸೇರಿದಂತೆ ಹಲವು ಔಷಧಿಗಳ ಬೆಲೆ ಇಳಿಕೆಯಾಗುವ ನಿರೀಕ್ಷೆಯಿದೆ.

ದುಬಾರಿ ಚಿಕಿತ್ಸೆಯಿಂದ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಈ ಕ್ರಮದಿಂದ ನೆರವಾಗಲಿದೆ ಎಂದು ನಿರೀಕ್ಷಿಸಲಾಗಿದೆ. ಔಷಧಿಗಳ ವಿತರಣೆ ಹಾಗೂ ಚಿಲ್ಲರೆ ಮಾರಾಟದ ಹಂತಗಳಲ್ಲಿ ವಿಧಿಸಲಾಗುವ ಹೆಚ್ಚುವರಿ ಲಾಭಾಂಶವನ್ನು ನಿಯಂತ್ರಿಸುವುದು ಸರ್ಕಾರದ ಉದ್ದೇಶವಾಗಿದೆ.

**ಕಂಪನಿಗಳಿಗೆ ಸೂಚನೆ:** ಗೆಜೆಟ್ ಅಧಿಸೂಚನೆ ಪ್ರಕಟವಾದ ಏಳು ದಿನಗಳೊಳಗೆ ಪರಿಷ್ಕೃತ ಬೆಲೆಗಳ ವಿವರವನ್ನು ರಾಷ್ಟ್ರೀಯ ಔಷಧ ಬೆಲೆ ನಿಯಂತ್ರಣ ಪ್ರಾಧಿಕಾರಕ್ಕೆ (ಎನ್‌ಪಿಪಿಎ) ಸಲ್ಲಿಸುವಂತೆ ಔಷಧ ತಯಾರಿಕಾ ಕಂಪನಿಗಳಿಗೆ ಸೂಚಿಸಲಾಗಿದೆ. ಕಂಪನಿಗಳು ತಮ್ಮ ಜಾಲತಾಣಗಳಲ್ಲಿ ಹೊಸ ದರಗಳನ್ನು ಪ್ರಕಟಿಸುವುದರ ಜತೆಗೆ, ಔಷಧ ವಿತರಕರು, ಚಿಲ್ಲರೆ ಮಾರಾಟಗಾರರು ಮತ್ತು ಆಸ್ಪತ್ರೆಗಳಿಗೂ ಮಾಹಿತಿ ನೀಡಬೇಕು.

ನವೆಂಬರ್ 9ರಿಂದ ಔಷಧ ಮಾರಾಟಗಾರರು ಮತ್ತು ಆಸ್ಪತ್ರೆಗಳು ಸಂಬಂಧಿತ ಔಷಧಿಗಳನ್ನು ಪರಿಷ್ಕೃತ ದರದಲ್ಲಿಯೇ ಮಾರಾಟ ಮಾಡಬೇಕು. ಆಸ್ಪತ್ರೆಗಳು ತಮ್ಮ ಔಷಧಾಲಯಗಳು ಹಾಗೂ ಜಾಲತಾಣಗಳಲ್ಲಿ ಹೊಸ ದರಗಳನ್ನು ರೋಗಿಗಳಿಗೆ ಸ್ಪಷ್ಟವಾಗಿ ಕಾಣುವಂತೆ ಪ್ರದರ್ಶಿಸಬೇಕು ಎಂದು ಸರ್ಕಾರ ನಿರ್ದೇಶಿಸಿದೆ.

ಕ್ಯಾನ್ಸರ್ ಚಿಕಿತ್ಸೆಯು ದೀರ್ಘಾವಧಿಯದ್ದಾಗಿರುವುದರಿಂದ ಔಷಧಿಗಳ ವೆಚ್ಚವು ರೋಗಿಗಳ ಕುಟುಂಬಗಳ ಮೇಲೆ ದೊಡ್ಡ ಆರ್ಥಿಕ ಹೊರೆ ಉಂಟುಮಾಡುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಕ್ರಮವು ಚಿಕಿತ್ಸಾ ವೆಚ್ಚ ತಗ್ಗಿಸಲು ನೆರವಾಗುವ ನಿರೀಕ್ಷೆಯಿದೆ. ಆದರೆ, ರೋಗಿಗಳಿಗೆ ದೊರೆಯುವ ನೈಜ ಉಳಿತಾಯವು ಅವರು ಬಳಸುವ ಔಷಧಿ ಮತ್ತು ಅದರ ಪರಿಷ್ಕೃತ ಬೆಲೆಯನ್ನು ಅವಲಂಬಿಸಿರುತ್ತದೆ.

# ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಕೇಂದ್ರದ ಸಮಿತಿ ಸಭೆ

**ಕಬ್ಬು ಬೆಳೆಗಾರರ ಬೇಡಿಕೆಗಳ ಪರಿಶೀಲನೆಗೆ ಪ್ರೊ. ರಮೇಶ್ ಚಂದ್ರ ನೇತೃತ್ವದ ಸಮಿತಿ ಸಭೆ; ರಾಜ್ಯ ಸರ್ಕಾರಗಳು, ರೈತರು, ಸಕ್ಕರೆ ಕಾರ್ಖಾನೆಗಳು ಹಾಗೂ ಕೃಷಿ ತಜ್ಞರೊಂದಿಗೆ ಸಮಾಲೋಚನೆ ನಡೆಸಿ ಹೊಸ ಮಾರ್ಗಸೂಚಿ ರೂಪಿಸಲು ನಿರ್ಧಾರ. ರೈತರ ಹಿತಾಸಕ್ತಿ ಮತ್ತು ಸಕ್ಕರೆ ವಲಯದ ದೀರ್ಘಕಾಲೀನ ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡಲು ಸಮಿತಿ ಚಿಂತನೆ.**

● ವಿಕ್ರಮ ವಾಹಿನಿ | ನವದೆಹಲಿ

ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರಚಿಸಿರುವ ಜಂಟಿ ಸಮಿತಿಯ ಮೊದಲ ಸಭೆ ವಿಜಯದಶಮಿ ದಿನ ನವದೆಹಲಿಯಲ್ಲಿ ನಡೆಯಿತು. ನೀತಿ ಆಯೋಗದ ಮಾಜಿ ಸದಸ್ಯ ಪ್ರೊ. ರಮೇಶ್ ಚಂದ್ರ ನೇತೃತ್ವದ ಸಮಿತಿಯು ದೇಶದ ಸಕ್ಕರೆ ವಲಯದ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಗೆ ಹೊಸ ಮಾರ್ಗಸೂಚಿ ರೂಪಿಸಲು ನಿರ್ಧರಿಸಿದೆ.

ಸಭೆಯಲ್ಲಿ ಕಬ್ಬು ಬೆಳೆಗಾರರ ಬೇಡಿಕೆಗಳು ಹಾಗೂ ಸಕ್ಕರೆ ವಲಯ ಎದುರಿಸುತ್ತಿರುವ ಪ್ರಮುಖ ಸವಾಲುಗಳ ಕುರಿತು ಚರ್ಚಿಸಲಾಯಿತು. ಈ ಸಂಬಂಧ ರಾಜ್ಯ ಸರ್ಕಾರಗಳು, ಸಕ್ಕರೆ ಕಾರ್ಖಾನೆಗಳು, ರೈತ ಸಂಘಟನೆಗಳು ಮತ್ತು ಕೃಷಿ ವಿಜ್ಞಾನಿಗಳೊಂದಿಗೆ ಸಮಾಲೋಚನೆ ನಡೆಸಲು ಸಮಿತಿ ತೀರ್ಮಾನಿಸಿದೆ.

**ರೈತರು, ತಜ್ಞರ ಅಭಿಪ್ರಾಯ ಸಂಗ್ರಹ:** ಕಬ್ಬು ಬೆಳೆಗಾರರ ಸಮಸ್ಯೆಗಳು, ಸಕ್ಕರೆ ಕಾರ್ಖಾನೆಗಳ ಕಾರ್ಯನಿರ್ವಹಣೆ ಹಾಗೂ ಸಕ್ಕರೆ ವಲಯದ ಸಾಧಕ-ಬಾಧಕಗಳನ್ನು ಸಮಗ್ರವಾಗಿ ಅಧ್ಯಯನ ಮಾಡಲು ಸಮಿತಿ ಮುಂದಾಗಿದೆ. ರೈತ ಸಂಘಟನೆಗಳು, ಸಕ್ಕರೆ ಕಾರ್ಖಾನೆಗಳ ಸಂಘಗಳು ಮತ್ತು ಕ್ಷೇತ್ರದ ಪ್ರಮುಖ ಸಂಶೋಧನಾ ಸಂಸ್ಥೆಗಳ ಅಭಿಪ್ರಾಯಗಳನ್ನು ಪಡೆಯಲು ನಿರ್ಧರಿಸಲಾಗಿದೆ.

ಕರ್ನಾಟಕ, ಮಹಾರಾಷ್ಟ್ರ, ಉತ್ತರ ಪ್ರದೇಶ ಮತ್ತು ಹರಿಯಾಣ ಸೇರಿದಂತೆ ಪ್ರಮುಖ ಕಬ್ಬು ಉತ್ಪಾದಕ ರಾಜ್ಯಗಳ ಕೃಷಿ ವಿಜ್ಞಾನಿಗಳು, ಸಂಶೋಧಕರು ಹಾಗೂ ಕೃಷಿ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳನ್ನೂ ಸಮಾಲೋಚನಾ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಲಾಗುತ್ತದೆ. ವೈಜ್ಞಾನಿಕ ಅಧ್ಯಯನ ಮತ್ತು ತಜ್ಞರ ಸಲಹೆಗಳನ್ನು ಆಧರಿಸಿ ಸಕ್ಕರೆ ವಲಯದ ಅಭಿವೃದ್ಧಿಗೆ ಅಗತ್ಯವಾದ ನೀತಿ ಸಲಹೆಗಳನ್ನು ವರದಿಯಲ್ಲಿ ಸೇರಿಸುವ ನಿರೀಕ್ಷೆಯಿದೆ.

ಕಬ್ಬು ಬೆಳೆಗಾರರ ಬೇಡಿಕೆಗಳಿಗೆ ಸ್ಪಂದಿಸುವುದರ ಜತೆಗೆ ರೈತರ ಹಿತಾಸಕ್ತಿ, ಸಕ್ಕರೆ ಕಾರ್ಖಾನೆಗಳ ಸುಸ್ಥಿರ ಕಾರ್ಯನಿರ್ವಹಣೆ ಮತ್ತು ಸಕ್ಕರೆ ವಲಯದ ದೀರ್ಘಕಾಲೀನ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಸಮಿತಿ ವರದಿ ಸಿದ್ಧಪಡಿಸಲಿದೆ. ಸಮಿತಿಯ ಶಿಫಾರಸುಗಳ ಆಧಾರದಲ್ಲಿ ಮುಂದಿನ ಕ್ರಮಗಳ ಕುರಿತು ಕೇಂದ್ರ ಸರ್ಕಾರ ನಿರ್ಧಾರ ಕೈಗೊಳ್ಳುವ ನಿರೀಕ್ಷೆಯಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 194,